MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 ಸಂಚಿಕೆ: 85 ಭಾನುವಾರ : 18-01-2026 ರಾಯಚೂರು RNI NO: KARKAN/2022/90446 ಪುಟ: 4 ಬೆಲೆ: ರೂ: 2-00

VOLUME: 05 ISSUE: 85 SUNDAY : 18-01-2026 RAICHUR EMAIL: YUVAMARGA@GMAIL.COM PAGE: 4 PRICE: Rs: 2-00

## ಶಾಸಕರು ಅಧಿವೇಶನದಲ್ಲಿ ಸಿಂಧನೂರು ಜಿಲ್ಲಾ ಕೇಂದ್ರವಾಗಲು ಧ್ವನಿ ಎತ್ತಲು ಕರವೇ ಒತ್ತಾಯ




ಯುವಮಾರ್ಗ ಸುದ್ದಿ

**ಸಿಂದನೂರು,ಜ.17–** ಜನವರಿ 22 ರಿಂದ 31ರವರೆಗೆ ಬೆಂಗಳೂರಿನಲ್ಲಿ ನಡೆಯುವ ವಿಧಾನ ಮಂಡಲದ ಅಧಿವೇಶನದಲ್ಲಿ ರಾಜಕೀಯ ಮುಖಂಡರು ಸಿಂಧನೂರು ಜಿಲ್ಲೆ ರಚನೆ ಕುರಿತೆ ಶಾಸಕ ಹಂಪನಗೌಡ ಬಾದರ್ಲಿ ಹಾಗೂ ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಧ್ವನಿ ಎತ್ತಬೇಕು. ಹಾಗೂ ಮಾಜಿ ಸಚಿವರು, ಸಂಸದರು, ಶಾಸಕರು ಕೂಡ ಸರ್ಕಾರದ ಮೇಲೆ ಒತ್ತಡ ಹಾಕಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಕನ್ನಡ ಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಉಪಾಧ್ಯಕ್ಷ ರಾದ ದೇವೇಂದ್ರಗೌಡ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಿಂಧನೂರು ತಾಲೂಕು ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ, ಹಾಗೂ ಕಲಬುರ್ಗಿ ಜಿಲ್ಲೆಗಳ ಮಧ್ಯಭಾಗದಲ್ಲಿರುವ ಸಿಂಧನೂರು ಪ್ರಮುಖವಾದ ವಾಣಿಜ್ಯ ನಗರವಾಗಿದೆ. ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಹೊಂದುವ ಮೂಲಕ ಅತ್ಯಂತ ತೀವ್ರಗತಿಯಲ್ಲಿ ಬೆಳವಣಿಗೆಯಾಗುತ್ತಿದೆ. ಶೈಕ್ಷಣಿಕ, ಸಾಂಸ್ಕೃತಿಕ, ಸಾಮಾಜಿಕವಾಗಿ, ವಿಶಿಷ್ಟತೆಯನ್ನು ಹೊಂದಿದೆ.

ತಾಲೂಕಿನಲ್ಲಿ ವಿವಿಧ ರಾಜ್ಯಗಳ ವಿವಿಧ ಸಂಸ್ಕೃತಿಗಳ ಜನರು ಬದುಕು (2ನೇ ಪುಟಕ್ಕೆ>>>)

## ಪಂಚರಾಜ್ಯಗಳ ಚುನಾವಣೆ ಹಿನ್ನೆಲೆಯಲ್ಲಿ ನಾಯಕತ್ವ ಬದಲಾವಣೆಗೆ ಬ್ರೇಕ್ ಹಾಕಿದ 'ಕೈ'ಕಮಾಂಡ್

**ಬೆಂಗಳೂರು ಜ.17–** ಪಂಚರಾಜ್ಯಗಳ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಸದ್ಯದ ಮಟ್ಟಿಗೆ ಕರ್ನಾಟಕ ರಾಜ್ಯ ರಾಜಕಾರಣದಲ್ಲಿ ಯಾವುದೇ ಬದಲಾವಣೆ ಅಸಾಧ್ಯ ಎಂದು ಕಾಂಗ್ರೆಸ್ ಹೈಕಮಾಂಡ್ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸ್ಪಷ್ಟ ಸಂದೇಶ ರವಾನಿಸಿದೆ.

ಅಸ್ಸಾಂ, ಪಶ್ಚಿಮಬಂಗಾಳ, ಕೇರಳ, ತಮಿಳುನಾಡು ಮತ್ತು ಪುದುಚೇರಿ ರಾಜ್ಯಗಳ ವಿಧಾನಸಭೆ ಚುನಾವಣೆ ಪ್ರಕ್ರಿಯೆ ಮುಂದಿನ ಮೇ ಮತ್ತು ಜೂನ್ ವೇಳೆಗೆ ಪೂರ್ಣಗೊಳ್ಳಲಿದೆ. ಆವರೆಗೂ ಕರ್ನಾಟಕ ಸೇರಿದಂತೆ ಯಾವುದೇ ರಾಜ್ಯಗಳ ರಾಜಕೀಯದಲ್ಲಿ ಬದಲಾವಣೆ ಮಾಡುವುದಿಲ್ಲ. ರಾಷ್ಟ್ರ ರಾಜಕಾರಣದಲ್ಲೂ ಯಥಾಸ್ಥಿತಿ ಮುಂದುವರೆಯಲಿದೆಎಂದು ಸ್ಪಷ್ಟ ಪಡಿಸಿರುವುದಾಗಿ ತಿಳಿದು ಬಂದಿದೆ.

ವಿಧಾನಸಭೆ ಚುನಾವಣೆ ಮುಗಿಯುವವರೆಗೂ ನಾಯಕತ್ವ ಬದಲಾವಣೆ ವಿಷಯವಾಗಲಿ ಅಥವಾ ಬೇರೆ ವಿಚಾರಗಳ ಚರ್ಚೆ ಬೇಡ. ರಾಜ್ಯ ರಾಜಕಾರಣದಲ್ಲೂ ಗೊಂದಲಗಳಾಗದಂತೆ ಎಚ್ಚರಿಕೆ ವಹಿಸುವಂತೆ ಡಿ.ಕೆ.ಶಿವಕುಮಾರ್ ಅವರಿಗೆ



ಮನವರಿಕೆ ಮಾಡಿಕೊಡಲಾಗಿದೆ ಎಂದು ಹೇಳಲಾಗಿದೆ.

ಅಸ್ಸಾಂ ವಿಧಾನಸಭೆ ಚುನಾವಣೆ ಸಂಬಂಧಪಟ್ಟಂತೆ ನಿನ್ನೆ ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಅಸ್ಸಾಂನ ಸ್ಥಳೀಯ ನಾಯಕರ ಮಹತ್ವದ ಸಭೆ ನಡೆದಿತ್ತು.ಬಳಿಕ ಡಿ.ಕೆ.ಶಿವ ಕುಮಾರ್ ಜೊತೆ ಹೈಕಮಾಂಡ್ ನಾಯಕರು ಮಹತ್ವದ ಚರ್ಚೆ ನಡೆದಿದ್ದಾರೆ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೇಸಿ ವೇಣುಗೋಪಾಲ್ ಹೈಕಮಾಂಡ್‌ನ ಸಂದೇಶವನ್ನು ರವಾನಿಸಿದ್ದಾರೆ ಎನ್ನಲಾಗಿದೆ.

ಅಸ್ಸಾಂ ಚುನಾವಣೆಯ ಉಸ್ತುವಾರಿ ನಿರ್ವಹಣೆಯನ್ನು ಡಿ.ಕೆ. ಶಿವಕುಮಾರ್ ಅವರಿಗೆ ವಹಿಸಲಾಗಿದೆ. ಚುನಾವಣೆಯ ತಯಾರಿ ಕುರಿತ ಪೂರ್ವಭಾವಿ ಸಭೆಯಲ್ಲಿ ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರು ಡಿ.ಕೆ.ಶಿವಕುಮಾರ್ ಅವರಿಗೆ ಹೆಚ್ಚಿನ ಮನ್ನಣೆ ನೀಡಿರುವುದು ಕಂಡುಬಂದಿದೆ.

ಮೂಲಗಳ ಪ್ರಕಾರ ಡಿ.ಕೆ.ಶಿವಕುಮಾರ್ ಅವರನ್ನು ರಾಷ್ಟ್ರ ರಾಜಕಾರಣದತ್ತ ಬರಲು ಹೈಕಮಾಂಡ್ ನಾಯಕರು ಸಲಹೆ ನೀಡಿದ್ದಾರೆ ಎನ್ನಲಾಗಿದೆ. ಮುಂದಿನ ಅವಧಿಗೆ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವುದು ನಿಶ್ಚಿತವಾಗಿದೆ. ಮುಂದಿನ ಚುನಾವಣೆಗಳಲ್ಲಿ ಯಾವುದೇ ಪಕ್ಷದ ಜೊತೆ ಮೈತ್ರಿ ಇಲ್ಲದೆ ಸ್ವತಂತ್ರವಾಗಿ ಚುನಾವಣೆ ನಡೆಸಿದರೆ ಗೆಲ್ಲುವ ಎಲ್ಲಾ ಸಾಧ್ಯತೆಗಳಿವೆ. ನೀವು ರಾಷ್ಟ್ರ ರಾಜಕಾರಣಕ್ಕೆ ಬಂದರೆ ಹೆಚ್ಚಿನ ಅವಕಾಶಗಳಿವೆ ಎಂದು ಹೇಳಿರುವುದಾಗಿ ಮೂಲಗಳು ತಿಳಿಸಿವೆ.

ರಾಜ್ಯದಲ್ಲಿ ಬಜೆಟ್ ಮಂಡನೆಗೂ ಮುನ್ನಾ ತಮಗೆ ಮುಖ್ಯಮಂತ್ರಿ ಸ್ಥಾನ ಬಿಟ್ಟು ಕೊಡಬೇಕು ಎಂದು ಪಟ್ಟು ಹಿಡಿದಿದ್ದರು (2ನೇ ಪುಟಕ್ಕೆ>>>)

## ಈಡಿಗ ಸೇರಿದಂತೆ 26 ಪಂಗಡಗಳನ್ನು 2ಎ.ಯಿಂದ ಎಸ್.ಟಿ. ಪ.ಪಂಗಡಕ್ಕೆ ಸೇರಿಸಬೇಕು: ಡಾ.ಶ್ರೀ ಪ್ರಣವಾನಂದ ಸ್ವಾಮೀಜಿ




ಯುವಮಾರ್ಗ ಸುದ್ದಿ

**ಮಾನ್ವಿ,ಜ.17–** ಪಟ್ಟಣದ ಪತ್ರಿಕಾ ಭವನದಲ್ಲಿ ಚಿತ್ತಾಪೂರ ಬ್ರಹ್ಮಶ್ರೀ ನಾರಾಯಣಗುರು ಶಕ್ತಿ ಪೀಠ ಕರದಾಳ ಪೀಠಾಧಿಪತಿಗಳಾದ ಡಾ.ಶ್ರೀ ಪ್ರಣವಾನಂದ ಸ್ವಾಮೀಜಿ ಮಾತನಾಡಿ ರಾಜ್ಯದಲ್ಲಿ ಈಡಿಗ ,ಬಿಲ್ಲವ,ನಾಮಧಾರಿ,ಧೀವರ,ತೀಯ ಸೇರಿದಂತೆ 26 ಪಂಗಡಗಳನ್ನು ಹೊಂದಿರುವ ಸಮುದಾಯವನ್ನು ಈಗಿರುವ 2ಎ.ಯಿಂದ ಎಸ್.ಟಿಗೆ ಮೀಸಲಾತಿ ನೀಡುವುದಕ್ಕೆ ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು, ನಮ್ಮ ಸಮುದಾಯದ ಕುಲಕಸುಬ ಗಿರುವ ಸೇಂದಿ ಇಳಿಸುವ ಕಸುಬಿಗೆ ಉಡುಪಿ ಮತ್ತು ಮಂಗಳೂರು ಜಿಲ್ಲೆಗಳಲ್ಲಿ ನೀಡಿರುವ ಅನುಮತಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತಾರಿಸಬೇಕು,ಕುಲಕಸುಬನ್ನು ಕಳೆದು ಕೊಂಡಿರುವ ಕಲ್ಯಾಣ ಕರ್ನಾಟಕದ ಸಂತ್ರಸ್ತ ಈಡಿಗ ಸಮುದಾಯದ ಪ್ರತಿ ಕುಟುಂಬಕ್ಕೆ 5 ಎಕರೆ ಕೃಷಿ ಜಮೀನು ಮಂಜೂರು ಮಾಡಬೇಕು. ಬ್ರಹ್ಮಶ್ರೀ ನಾರಾಯಣಗುರು ಅಭಿವೃದ್ಧಿ ನಿಗಮಕ್ಕೆ 5ನೂರುಕೋಟಿ ಅನುದಾನ ಬಿಡುಗಡೆ ಮಾಡಬೇಕು, ಬೆಂಗಳೂರಿನ ವಿಧಾನಸೌಧದ ಆವರಣದಲ್ಲಿ ಬ್ರಹ್ಮಶ್ರೀ ನಾರಾಯಣ ಗುರುಗಳ ಪುತ್ತಳಿಯನ್ನು ಸ್ಥಾಪಿಸಬೇಕು, ಈಡಿಗ ಸಮಾಜದ ಶ್ರದ್ಧಾ ಕೇಂದ್ರವಾದ ಶ್ರೀ ಸಿಗಂಧೂರು ಚೌಡೇಶ್ವರಿ ದೇವಸ್ಥಾನಕ್ಕೆ ಸೂಕ್ತವಾದ ಭದ್ರತೆಯನ್ನು ನೀಡಿ ಅಗತ್ಯ ಭೂಮಿ ಮಂಜೂರು ಮಾಡಬೇಕು, ಮಧ್ಯಪಾರಾಟದಲ್ಲಿ ಸಮುದಾಯದ 26 ಪಂಗಡಗಳಿಗೆ ಶೇ 50 ರಷ್ಟು ಮೀಸಲಾತಿ ನೀಡಿ, ಕೋಟಿ ಚೆನ್ನಯ್ಯರ ಹೆಸರನ್ನು ಮಂಗಳೂರು ವಿಮಾನ ನಿಲ್ದಾಣಕ್ಕೆ ಇಡುವುದಕ್ಕೆ ಕೇಂದ್ರಕ್ಕೆ ಶೀಪಾರಸ್ಸು ಮಾಡಬೇಕು, ಶರಣ ಕೋಟಿ ಚೆನ್ನಯ್ಯರ ಜನ್ಮಸ್ಥಳ ಮತ್ತು ಐಕ್ಯಸ್ಥಳಗಳ ಅಭಿವೃದ್ಧಿಗೆ 100ಕೋಟಿ ಅನುದಾನ ನೀಡಬೇಕು,ನಾರಾಯಣ ಗುರುಗಳ ಅಧ್ಯಯನ ಪೀಠವನ್ನು ವಿಶ್ವವಿದ್ಯಾಲಯಗಳಲ್ಲಿ ಸ್ಥಾಪಿಸಬೇಕು,ಹಾಗೂ ವಿಶ್ವವಿದ್ಯಾಲಯಕ್ಕೆ ಬ್ರಹ್ಮಶ್ರೀ ನಾರಾಯಣಗುರುಗಳ ಹೆಸರನ್ನು ಘೋಷಣೆ ಮಾಡಬೇಕು, ಬ್ರಹ್ಮಶ್ರೀ ನಾರಾಯಣಗುರುಗಳ ಜಯಂತಿಯಂದು ಅವರ ಹೆಸರನ್ನು ಒಳಗೊಂಡ ರಾಜ್ಯಮಟ್ಟದ 5 ಲಕ್ಷ ನಗದು ಪುರಸ್ಕಾರ ಹೊಂದಿದ ಪ್ರಶಸ್ತಿಯನ್ನು ಸಮುದಾಯದ ಸಾಧಕರಿಗೆ ನೀಡಬೇಕು, ಉತ್ತರ ಕನ್ನಡ ಭಾಗದಲ್ಲಿನ ಅರಣ್ಯ ಪ್ರದೇಶದಲ್ಲಿ ಉಳುಮೆ ಮಾಡಿಕೊಂಡಿರುವ ಹಾಗೂ ಮನೆಗಳನ್ನು ಕಟ್ಟಿಕೊಂಡಿರುವ ಸಮುದಾಯದವರಿಗೆ ಸಕ್ರಮ ಗೊಳಿಸಬೇಕು, ಶರಣರಾದ ಹೆಂಡದ ಮಾರಯ್ಯನವರ ಜಯಂತಿಯನ್ನು ಸರ್ಕಾರದಿಂದ ಆಚರಣೆ ಮಾಡಬೇಕು, ಶಿವಮೊಗ್ಗ ಜಿಲ್ಲೆಯ ಹೊಸನಗರ ಕ್ಷೇತ್ರವನ್ನು ವಿಧಾನಸಭಾ ಕ್ಷೇತ್ರವನ್ನಾಗಿಸಬೇಕು ಹಾಗೂ ಜಿಲ್ಲೆಯಲ್ಲಿನ ಮುಳುಗಡೆ ಸಂತ್ರಸ್ಥರಿಗೆ ಸೂಕ್ತ ಪರಿಹಾರ ವಸತಿ ಕಲ್ಪಿಸಿ ಕೃಷಿ ಜಮೀನು ನೀಡಬೇಕು, ರಾಜ್ಯದಲ್ಲಿ ಸಮುದಾಯದವರಿಗೆ ವಿವಿಧ ವಸತಿ ಯೋಜನೆಗಳಡಿಯಲ್ಲಿ 25 ಸಾವಿರ ಮನೆಗಳನ್ನು ಮಂಜೂರು ಮಾಡಬೇಕು ಸಮುದಾಯದ ಟ್ರಸ್ಟ್ ವೈದ್ಯ ಕಾಲೇಜು ಮಂಜೂರು ಮಾಡಬೇಕು, ರಾಜ್ಯದ ಶಿವಮೊಗ್ಗ ,ಮಂಗಳೂರು,ಕಾರವಾರ, (2ನೇ ಪುಟಕ್ಕೆ>>>)

## ಇಂದು ಅಲೆಮಾರಿಗಳ ಬೃಹತ್ ಸಾಂಸ್ಕೃತಿಕ ಕಲಾ ಪ್ರದರ್ಶನ ಮತ್ತು ಸ್ವಾಭಿಮಾನ ಸಮಾವೇಶ: ಮಹಾದೇವಪ್ಪ




ಯುವಮಾರ್ಗ ಸುದ್ದಿ

**ಮಾನ್ವಿ,ಜ.17–** ಪಟ್ಟಣದ ಪತ್ರಿಕಾ ಭವನದಲ್ಲಿ ಕರ್ನಾಟಕ ರಾಜ್ಯ ಅಲೆಮಾರಿ ಪ.ಜಾ. ಚನ್ನದಾಸರ್, ಹೊಲೆಯಾದಾಸರ್, ಮಾಲದಾಸರಿ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರು ರಾಜ್ಯ ಕಾರ್ಯದರ್ಶಿ ಮಹಾದೇವಪ್ಪ ಮಾತನಾಡಿ ಈ ದೇಶದ ಮೂಲ ನಿವಾಸಿಗಳಾಗಿ ಸದಾ ಅಲೆಮಾರಿಗಳಾಗಿ ಊರ ಹೋರಗಿನ ಗುಡಿಸಲುಗಳಲ್ಲಿ ವಾಸ ಮಾಡುತ್ತ ದೇಶದ ಸಾಂಸ್ಕೃತಿ,ಇತಿಹಾಸ ವನ್ನು, ಪರಂಪರೆಯನ್ನು ಉಳಿಸಿಕೊಂಡು,ಬೆಳೆಸಿಕೊಂಡು ಬಂದಿರುವ ಚನ್ನದಾಸರ್, ಹೊಲೆಯಾದಾಸರ್, ಮಾಲದಾಸರಿ ಅಲೇಮಾರಿ ಸಮುದಾಯಗಳು ಸದಾ ಹರಿನಾಮ ಸ್ಮರಣೆ ಮಾಡುತ್ತಾ ಏಕತಾರಿ,ಶಂಖ, ಜಾಗಟೆ,ಗಳನ್ನು ಹಿಡಿದು ಅಲೆಯುತ್ತ ಜೀವನಕ್ಕಾಗಿ ಭೀಕ್ಷಾಟನೆ ಮಾಡುವ ರಾತ್ರಿ ವೇಳೆ ಬಯಾಲು ನಾಟಕ ಪ್ರದರ್ಶನದಲ್ಲಿ ತಾಳ ಮದ್ದಲಿ,ಪೀಟಿಲು ನುಡಿಸುತ್ತ ಜೀವನ ಸಾಗಿಸುವ ನಮ್ಮ ಸಮುದಾಯದವರು ಇಂದಿಗೂ ಕೂಡ ರಾಜಕೀಯವಾಗಿ, ಸಾಮಾಜಿಕವಾಗಿ,ಆರ್ಥಿಕವಾಗಿ ಅತ್ಯಂತ ಹಿಂದುಳಿದಿದ್ದರು ಕೂಡ ಒಳ ಮೀಸಲಾತಿಯಲ್ಲಿ ಶೇ1 ರ ವಿಶೇಷ ಸ್ಥಾನ ಮಾನವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ದೇಶದ ಸರ್ವೋಚ್ಚ ನ್ಯಾಯಾಲಯದ ಅದೇಶದ ನಂತರವು ನೀಡದೆ ಸಮುದಾಯವನ್ನು ಮೀಸಲಾತಿಯ ಸೌಲಾಭ್ಯಗಳಿಂದ ವಂಚಿಸುತ್ತಿದೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅಯೋಗವು ನೀಡಿರುವ ಒಳಮೀಸಲಾತಿ ವರದಿಯಂತೆ ನಮ್ಮ ಸಮುದಾಯದವರಿಗೆ ನ್ಯಾಯ ಒದಗಿಸುವಂತೆ ಒತ್ತಾಯಿಸಿ ಪಟ್ಟಣದ ಶ್ರೀ ಸತ್ಯಸಾಯಿ ಗಾರ್ಡನ್ ಇಂದು ಬೆ.10ಕ್ಕೆ ಅಲೆಮಾರಿಗಳ ಬೃಹತ್ ಸಾಂಸ್ಕೃತಿಕ ಕಲಾ ಪ್ರದರ್ಶನ ಮತ್ತು ಸ್ವಾಭಿಮಾನ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದ್ದು ನಮ್ಮ ಬೆಡಿಕೆಗಳಾದ ರಾಜ್ಯ ಸರ್ಕಾರವು ನಮ್ಮ ಸಮುದಾಯದ ಭೂರಹಿತ ಅಲೆಮಾರಿಗಳಿಗೆ ಭೂಮಿ,ವಸತಿ ನೀಡಬೇಕು, ಅಲೆಮಾರಿ ನಿಗಮ ಮಂಡಳಿ ರಚನೆ ಮಾಡಿ 5ನೂರು ಕೋಟಿ ಅನುದಾನ ನೀಡಬೇಕು, ಅಲೆಮಾರಿ ಸಮುದಾಯದವರ ಕಲೆಗಳ ಪ್ರದರ್ಶನಕ್ಕೆ ಸಾಂಸ್ಕೃತಿಕ ಭವನಗಳನ್ನು ನಿರ್ಮಾಣ ಮಾಡಿ ಮುಂದಿನ ಪೀಳಿಗೆಗೆ ನಮ್ಮ ಕಲೆಗಳ ಬಗ್ಗೆ ತರಬೇತಿ ನೀಡಬೇಕು,ಅಲೆಮಾರಿ ಸಮುದಾಯಗಳ ಕುಟುಂಬದಲ್ಲಿನ ಮಕ್ಕಳಿಗೆ ಜಿಲ್ಲಾ ಮಟ್ಟದ ವಸತಿ ನಿಲಯಗಳನ್ನು ಪ್ರಾರಂಭಿಸಬೇಕು,ತಾಂತ್ರಿಕ ಮತ್ತು ವೃತ್ತಿ ಶಿಕ್ಷಣ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ನೀಡುವ ತರಬೇತಿಯಲ್ಲಿ ಮೀಸಲಾತಿ (2ನೇ ಪುಟಕ್ಕೆ>>>)

## ಕರ್ನಾಟಕ ರಾಜ್ಯ ಯುವ ಆಯೋಗವನ್ನು ಸ್ಥಾಪಿಸಲು ತಹಶೀಲ್ದಾರ್ ಮೂಲಕ ಸಿ ಎಂ ಸಿದ್ದರಾಮಯ್ಯ ನವರಿಗೆ ಮನವಿ

ಯುವಮಾರ್ಗ ಸುದ್ದಿ

**ಸಿಂಧನೂರು,ಜ.17–** ಸೋಲಿಡಾರಿಟಿ ಯೂತ್ ಮೂವೆಂಟ್ ಕರ್ನಾಟಕದ ಪರವಾಗಿ, ಕರ್ನಾಟಕದ ಯುವಜನರ ಹಿತಾಸಕ್ತಿಗಳ ರಕ್ಷಣೆಗೆ ಹಾಗೂ ಅವರ ಸಮಗ್ರ ಅಭಿವೃದ್ಧಿಗಾಗಿ ಕರ್ನಾಟಕ ರಾಜ್ಯ ಯುವ ಆಯೋಗವನ್ನು ಸ್ಥಾಪಿಸಲು ತಹಶೀಲ್ದಾರ್ ಮೂಲಕ ಸಿ ಎಂ ಸಿದ್ದರಾಮಯ್ಯ ನವರಿಗೆ ಮನವಿಯನ್ನು ಸಲ್ಲಿಸಲಾಯಿತು.

ಕರ್ನಾಟಕದಲ್ಲಿ ಎರಡು ಕೋಟಿಗೂ ಹೆಚ್ಚು ಯುವಜನರು ವಾಸಿಸುತ್ತಿದ್ದು, ಅವರು ಶಿಕ್ಷಣ, ಉದ್ಯೋಗ, ಮಾನಸಿಕ ಆರೋಗ್ಯ, ಸಾಮಾಜಿಕ ಭದ್ರತೆ ಮತ್ತು ನಾಗರಿಕ ಭಾಗವಹಿಸುವಿಕೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಗಂಭೀರ ಸವಾಲುಗಳನ್ನು ಎದುರಿಸುತ್ತಿದ್ದಾರೆ. ನಿರುದ್ಯೋಗ, ಮಾನಸಿಕ ಒತ್ತಡ, ಮಾದಕ ವ್ಯಸನ, ಸೈಬರ್ ವಂಚನೆ, ಸಾಮಾಜಿಕ ಅಸುರಕ್ಷತೆ ಮತ್ತು ನಿರ್ಧಾರ ಪ್ರಕ್ರಿಯೆಗಳಲ್ಲಿ ಪ್ರತಿನಿಧಿತ್ವದ ಕೊರತೆ ಮುಂತಾದ ಗಂಭೀರ ಸಮಸ್ಯೆಗಳು ಯುವಜನರಲ್ಲಿ ಹೆಚ್ಚುತ್ತಿವೆ.

ರಾಜ್ಯ ಗೃಹ ಇಲಾಖೆ ಅಧಿಕೃತ ಅಂಕಿಅಂಶಗಳ ಪ್ರಕಾರ, 2022 ರಿಂದ ನವೆಂಬರ್ 2025ರವರೆಗೆ ಕರ್ನಾಟಕದಲ್ಲಿ 9,450 ಆತ್ಮಹತ್ಯೆ ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ ಬಹುಪಾಲು ಯುವಜನರಿಗೆ ಸಂಬಂಧಿಸಿದೆ. ವಿವಿಧ ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ಅಧ್ಯಯನಗಳು ಸುಮಾರು 30% ಯುವಜನರು ಮಾನಸಿಕ ಆರೋಗ್ಯ



ಸಮಸ್ಯೆಗಳು ಅಥವಾ ದೀರ್ಘಕಾಲದ ಮಾನಸಿಕ ಒತ್ತಡದಿಂದ ಬಳಲುತ್ತಿದ್ದಾರೆ ಎಂದು ಸೂಚಿಸುತ್ತವೆ.

ಅದೇ ರೀತಿ, NSSO ಸಮೀಕ್ಷೆಗಳ ಪ್ರಕಾರ ಯುವಜನರಲ್ಲಿ ದೊಡ್ಡ ಪ್ರಮಾಣದವರು ಶಿಕ್ಷಣ, ಉದ್ಯೋಗ ಅಥವಾ ತರಬೇತಿಯಲ್ಲಿ ತೊಡಗಿಸಿಕೊಳ್ಳದೇ ಇರುವ NEET( Not in Education, Employment or Training) ವರ್ಗಕ್ಕೆ ಸೇರಿದ್ದಾರೆ. ಇದರಿಂದ ಅವರ ಭವಿಷ್ಯ ಮತ್ತು ರಾಜ್ಯದ ಮಾನವ ಸಂಪನ್ಮೂಲ ಅಭಿವೃದ್ಧಿಯ ಮೇಲೆ ದೀರ್ಘಕಾಲೀನ ದುಷ್ಪರಿಣಾಮ ಬೀರುತ್ತಿದೆ.

2022ರಲ್ಲಿ ರಾಜ್ಯ ಯುವ ನೀತಿ ಇದ್ದರೂ ಸಹ, ಅದರ ಪರಿಣಾಮಕಾರಿ ಅನುಷ್ಠಾನ, ವಿವಿಧ ಇಲಾಖೆಗಳ ಯುವ ಕಾರ್ಯಕ್ರಮಗಳ ಸಮನ್ವಯ, ಯುವಜನರ ಅಹವಾಲುಗಳ ಪರಿಹಾರ ಹಾಗೂ ಸಾಕ್ಷ್ಯಾಧಾರಿತ ನೀತಿ ಶಿಫಾರಸುಗಳನ್ನು ನೀಡುವ ಕಾನೂನುಬದ್ಧ ಸಂಸ್ಥೆ ರಾಜ್ಯದಲ್ಲಿ ಪ್ರಸ್ತುತ ಇಲ್ಲ. ಇದರಿಂದ ಯುವ ಕಲ್ಯಾಣ ಕ್ಷೇತ್ರದಲ್ಲಿ ಗಂಭೀರ ಸಂಸ್ಥಾತ್ಮಕ ಶೂನ್ಯತೆ ಉಂಟಾಗಿದೆ.

ಕೇರಳ, ಅಸ್ಸಾಂ, ಮಿಜೋರಾಂ, ಬಿಹಾರ ಸೇರಿದಂತೆ ಹಲವು ರಾಜ್ಯಗಳಲ್ಲಿ ಈಗಾಗಲೇ ಯುವ ಆಯೋಗಗಳು ಕಾರ್ಯನಿರ್ವಹಿಸುತ್ತಿದ್ದು, ಅವು ಯುವ ಕಲ್ಯಾಣ, ಉದ್ಯೋಗ ಮಾರ್ಗದರ್ಶನ, ಮಾನಸಿಕ ಆರೋಗ್ಯ, ಮಾದಕ ವಸ್ತು ತಡೆ ಮತ್ತು ನಾಯಕತ್ವ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ. ಹೆಚ್ಚಿನ ಯುವಜನಸಂಖ್ಯೆಯನ್ನು ಹೊಂದಿರುವ ಕರ್ನಾಟಕ ರಾಜ್ಯಕ್ಕೂ ನಹ ಇಂತಹ ಆಯೋಗದ ಅಗತ್ಯ ತೀವ್ರವಾಗಿದೆ.

ಕರ್ನಾಟಕ ರಾಜ್ಯ ಯುವ ಆಯೋಗವು ಯುವ ನಾಗರಿಕರು (2ನೇ ಪುಟಕ್ಕೆ>>>)

## ಸಂಸ್ಕೃತಿ ಪ್ರತಿಬಿಂಬಿಸುವ ಸುಗ್ಗಿ ಉತ್ಸವ, ಮಕ್ಕಳಿಂದ ವಿವಿಧ ಅಲಂಕಾರ, ವೇಷ ಭೂಷಣ

ಯುವಮಾರ್ಗ ಸುದ್ದಿ



**ಮಸ್ಕಿ,ಜ.17–** ತಾಲೂಕಿನ ಹಾಲಾಪೂರದ ದಿ ಬೆಸ್ಟ್ ಪಬ್ಲಿಕ್ ಶಾಲೆಯಲ್ಲಿ ವಿನೂತನ, ವಿಶಿಷ್ಟಪೂರ್ಣ ಸುಗ್ಗಿ ಉತ್ಸವ ಕಾರ್ಯಕ್ರಮ ತೊರಳು ತೋರಣಗಳಿಂದ,ಹೂ ಅಲಂಕಾರಗಳಿಂದ ಶಾಲೆ ಕಂಗೊಳಿಸುತ್ತಿತ್ತು. ಕಾರ್ಯಕ್ರಮದ ಪೂಜೆಯನ್ನು ಬಸವರಾಜ ಸ್ವಾಮಿ ನೆರವೇರಿಸಿದರು . ಉದ್ಘಾಟನೆಯನ್ನು ಶ್ರೀ ದಂಡಗುಂಡಪ್ಪ ತಾತ ಜಂಗಮರಹಳ್ಳಿ ಅವರಿಂದ ನಡೆಯಿತು.ನಂತರ ಮುಖ್ಯಗುರು ರವಿಕುಮಾರ ತೋರಣದಿನ್ನಿ ಮಾತಾಡುತ್ತಾ ನಮ್ಮ ದೇಶದ ಸಂಸ್ಕೃತಿ, ಸಂಸ್ಕಾರ, ಸಂಪ್ರದಾಯ ಇಡಿ ವಿಶ್ವವೇ ಮೆಚ್ಚುವಂತದ್ದು, ಭಾರತ ವಿವಿಧತೆಯಲ್ಲಿ ಏಕತೆ ಹೊಂದಿರುವ ದೇಶ, ಅನೇಕ ಆಚಾರ, ವಿಚಾರ ಕಾಣುತ್ತೇವೆ, ಇಂದು ಆಧುನಿಕ ಜೀವನಶೈಲಿ ಭರಾಟೆಯಲ್ಲಿ ಗ್ರಾಮೀಣ ಬದುಕಿನ ಸೊಗಡು ಮಾಯವಾಗುತ್ತಿದ್ದು, ಮೊಬೈಲ್, ಟಿವಿ ಇವುಗಳೇ ನಮ್ಮ ಪರಂಪರೆಗೆ ಮಾರಕವಾಗುತ್ತಿದ್ದು, ಅದಕ್ಕೆ ಇಂದಿನ ಯುವ ಪೀಳಿಗೆಗೆ ನಮ್ಮ ಗತವೈಭವಸಾರುವ ಪರಂಪರೆಯನ್ನು ಉಳಿಸುವ ಬೆಳೆಸುವ ನಿಟ್ಟಿನಲ್ಲಿ ನಮ್ಮ ಶಾಲೆಯಲ್ಲಿ ಕಳೆದ ವರ್ಷದಿಂದ ಸುಗ್ಗಿ ಉತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂ ಡಿದ್ದೇವೆ ಎಂದು ಮುಖ್ಯಗುರು ರವಿಕುಮಾರ ತೋರಣದಿನ್ನಿ ಹೇಳಿದರು. ಈ ಸಂದರ್ಭದಲ್ಲಿ ಶಾಲೆಯ ಉಪಾಧ್ಯಕ್ಷರಾದ ಕೆ ಶೇಖರಪ್ಪ, ಕಾರ್ಯದರ್ಶಿ ಸಿದ್ದು, ಗ್ರಾಮದ ಮುಖಂಡರು, ಪಾಲಕ ಪೋಷಕರು, ಶಿಕ್ಷಕರಾದ ಕೃಷ್ಣಕುಮಾರ, ಕುಪ್ಪಣ್ಣ, ದೇವೇಂದ್ರಕುಮಾರ, ಶಿಕ್ಷಕಿಯರು ಇದ್ದರು. ಕಾರ್ಯಕ್ರಮ ನಂತರ ಮಕ್ಕಳಿಂದ ವಿವಿಧ ವೇಷ ಭೂಷಣಗಳೊಂದಿಗೆ ನೃತ್ಯ, ಡೊಳ್ಳು, ಗಾಯನ ಇನ್ನಿತರ ಸಾಂಸ್ಕೃತಿಕ ಕಾರ್ಯಕ್ರಮಗಳು ಅತ್ಯುತ್ತಮವಾಗಿ ಮೂಡಿ ಬಂದವು.

ಯುವ ಮಾರ್ಗ
www.yuvamarga.com Yuva Marga yuva_marga_

# ಮೊದಲನೇಯ ಪುಟದಿಂದ

## ಪಂಚರಾಜ್ಯಗಳ ಚುನಾವಣೆ ಹಿನ್ನೆಲೆಯಲ್ಲಿ ನಾಯಕತ್ವ ಬದಲಾವಣೆಗೆ ಬ್ರೇಕ್ ಹಾಕಿದ 'ಕೈ'ಕಮಾಂಡ್

ಎಂದು ಹೇಳಲಾಗಿದೆ. ಸದ್ಯದ ಪರಿಸ್ಥಿತಿಯಲ್ಲಿ ನಾಯಕತ್ವ ಬದಲಾವಣೆ ಮಾಡಿದರೆ ಅದು ರಾಜ್ಯಗಳ ವಿಧಾನಸಭೆಯ ಚುನಾವಣೆ ಫಲಿತಾಂಶದ ಮೇಲೆ ಅಡ್ಡ ಪರಿಣಾಮ ಬೀರಲಿದೆ. ಮುಂಬೈ ಮಹಾನಗರ ಪಾಲಿಕೆ ಸೇರಿದಂತೆ ಎಲ್ಲಾ ಚುನಾವಣೆಗಳಲ್ಲೂ ಕಾಂಗ್ರೆಸ್ ಗೆ ಹಿನ್ನಡೆಯಾಗಿದೆ. ಬಹು ನಿರೀಕ್ಷಿತ ಬಿಹಾರದಲ್ಲೂ ಕಾಂಗ್ರೆಸ್ ಗೆಲುವು ಸಾಧ್ಯವಾಗಿಲ್ಲ. ಪಂಚ ರಾಜ್ಯಗಳ ಪೈಕಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಅಸ್ಸಾಂನಲ್ಲಿ ಹೆಚ್ಚಿನ ಅವಕಾಶಗಳಿವೆ.

ಕರ್ನಾಟಕದ ರಾಜಕಾರಣದ ಬಗ್ಗೆ ತಲೆ ಕೆಡಿಸಿಕೊಳ್ಳದೆ ಅಸ್ಸಾಂನಲ್ಲಿನ ಗೆಲುವಿನತ್ತ ಗಮನ ಹರಿಸುವಂತೆ ಡಿ.ಕೆ.ಶಿವಕುಮಾರ್ ಅವರಿಗೆ ಸಲಹೆ ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ. ಅಸ್ಸಾಂ ಚುನಾವಣೆಯ ಬಳಿಕ ಹೈಕಮಾಂಡ್ ನಿಲುವೇನು ಎಂಬ ಬಗ್ಗೆ ಸ್ಪಷ್ಟತೆ ನೀಡುವಂತೆ ಡಿ.ಕೆ.ಶಿವಕುಮಾರ್ ಪ್ರಶ್ನಿಸಿದ್ದು, ಸೂಕ್ತ ಸಂದರ್ಭದಲ್ಲಿ ನಿಮ ಶ್ರಮ ಮತ್ತು ಬದ್ಧತೆಗೆ ಪ್ರತಿಫಲ ಸಿಗಲಿದೆ. ನಿಮ ಪಕ್ಷ ನಿಷ್ಠೆಯ ಬಗ್ಗೆ ವರಿಷ್ಠರಿಗೆ ಅರಿವಿದೆ. ನಿಮ ಕಾಳಜಿಯನ್ನು ನಾವು ನೋಡಿಕೊಳ್ಳುತ್ತೇವೆ. ಈಗ ವಹಿಸಿರುವ ಜವಾಬ್ದಾರಿಗಳ ನಿರ್ವಹಣೆಯತ್ತ ನಿಮ ಗಮನ ಇರಲಿ ಎಂದು ಕೆ.ಸಿ.ವೇಣುಗೋಪಾಲ್ ಹೇಳಿದ್ದಾರೆ ಎನ್ನಲಾಗಿದೆ.ಸಂಕ್ಷಿಪ್ತ ಅವಧಿಯಲ್ಲಿನ ಮಾತುಕತೆಯಿಂದ ಡಿ.ಕೆ.ಶಿವಕುಮಾರ್ ಉತ್ಸಾಹ ಇಮಡಿಯಾಗಿದೆ ಎಂಬ ಮಾಹಿತಿ ಇದೆ.

## ಇಂದು ಅಲೆಮಾರಿಗಳ ಬೃಹತ್ ಸಾಂಸ್ಕೃತಿಕ ಕಲಾ ಪ್ರದರ್ಶನ ಮತ್ತು ಸ್ವಾಭಿಮಾನ ಸಮಾವೇಶ: ಮಹಾದೇವಪ್ಪ

ಕಲ್ಪಿಸಬೇಕು, ಅಲೆಮಾರಿ ಗ್ರಂಥಾಲಯಗಳನ್ನು ವಿಸ್ತರಿಸಬೇಕು,ಅಲೆಮಾರಿ ಮಹಿಳೆಯರು ಸ್ವಾವಲಂಬಿ ಬದುಕಿಗಾಗಿ ಆರ್ಥಿಕ ನೆರವನ್ನು ನೀಡಬೇಕು ಎಂದು ಒತ್ತಾಯಿಸಿ ರಾಜ್ಯದ ಮುಖ್ಯಮಂತ್ರಿಗಳಿಗೆ ಸಮಾವೇಶದಲ್ಲಿ ರಾಜ್ಯ ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಹಾಗೂ ಶಾಸಕ ಹಂಪಯ್ಯನಾಯಕ ರವರಿಗೆ ಮನವಿ ಸಲ್ಲಿಸಲಾಗುವುದು.

ಹಾಗೂ ಸಮುದಾಯದ ಪ್ರಶಸ್ತಿ ಪುರಸ್ಕೃತರಿಗೆ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ನಡೆಯಲಿದೆ. ಪ.ಜಾತಿ,ಪ.ಪಂಗಡ,ಅಲೆಮಾರಿ ಅಭಿವೃದ್ಧಿ ನಿಗಮ ಬೆಂಗಳೂರಿನ ಅಧ್ಯಕ್ಷರಾದ ಜಿ.ಪಲ್ಲವಿ, ಕರ್ನಾಟಕ ರಾಜ್ಯ ಅಲೆಮಾರಿ ಪ.ಜಾ. ಚನ್ನದಾಸರ್, ಹೊಲೆಯಾದಾಸರ್, ಮಾಲದಾಸರಿ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರು ರಾಜ್ಯಾಧ್ಯಕ್ಷರಾದ ಡಾ.ವಿ.ಚಲಪತಿ, ಕರ್ನಾಟಕ ಜನಪದ ವಿಶ್ವವಿದ್ಯಾಲಯ ಗುತ್ತಗುಡಿಯ ಸಂಶೋಧನಾಧಿಕಾರಿ ಡಾ.ಮಲ್ಲಿಕಾರ್ಜುನ ಮಾನ್ಪಡೆ ಉಪನ್ಯಾಸ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ, ಗಂಗಾಧರನಾಯಕ,ರಾಜಾ ವೆಂಕಟಪ್ಪ ನಾಯಕ, ಅಲೆಮಾರಿ ವಿಮುಕ್ತ ಬುಡಕಟ್ಟು ಮಹಾಸಭಾ ಬೆಂಗಳೂರಿನ ಜಂಟಿ ಕಾರ್ಯದರ್ಶಿ ಆನಂದಕುಮಾರ್ ಏಕಲವ್ಯ,ಹಿರಿಯ ದಲಿತ ಪರ ಹೋರಾಟಗಾರಾದ ಅಂಬಣ್ಣ ಅರೋಲಿಕರ್, ಎಸ್,ಮಾರೆಪ್ಪ, ಬಾಲಸ್ವಾಮಿ ಕೋಡ್ಲಿ ಸೇರಿದಂತೆ ಇನ್ನಿತರರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ರಾಜ್ಯಯುವ ಘಟಕದ ರಾಜ್ಯಾಧ್ಯಕ್ಷರಾದ ಬಿ.ಉಮೇಶ ಯಾಪಲದಿನ್ನಿ.ಬುಡ್ಗ ಜಂಗಮ ರಾಜ್ಯ ಸಂಚಾಲಕರಾದ ಮಹಾಂತೇಶ್ ಸಿಕಲ್, ಬಿ,ನಾಗಪ್ಪ ಬಾಯಿದೊಡ್ಡಿ, ಎಸ್.ವೆಂಕೋಬ, ಯಲ್ಲಪ್ಪ,ಬಸವರಾಜ, ಪ್ರದೀಪ್ ,ರಮೇಶ, ರಾಮಕೃಷ್ಣ ಇದ್ದರು.

## ಈಡಿಗ ಸೇರಿದಂತೆ 26 ಪಂಗಡಗಳನ್ನು 2ಎ.ಯಿಂದ ಎಸ್.ಟಿ. ಪ.ಪಂಗಡಕ್ಕೆ ಸೇರಿಸಬೇಕು: ಡಾ.ಶ್ರೀ ಪ್ರಣವಾನಂದ ಸ್ವಾಮೀಜಿ

ಉಡುಪಿ, ಜಿಲ್ಲೆಯಲ್ಲಿ 5 ಎಕರೆ ಜಮೀನಿನಲ್ಲಿ ಐ.ಎ.ಎಸ್.ಕೆ.ಎ.ಎಸ್.ಐ.ಪಿ.ಎಸ್. ಸೇರಿದಂತೆ ಉನ್ನತ ಆಡಳಿತ ತರಬೇತಿ ಕೇಂದ್ರಗಳನ್ನು ಸ್ಥಾಪಿಸಬೇಕು ಎನ್ನುವ ಬೇಡಿಕೆಗಳನ್ನು ಇಟ್ಟುಕೊಂಡು. ಚಿತ್ತಾಪೂರ ಬ್ರಹ್ಮಶ್ರೀ ನಾರಾಯಣಗುರು ಶಕ್ತಿ ಪೀಠ ಕರದಾಳ ನಿಂದ ಬೆಂಗಳೂರು ವರೆಗೆ 41 ದಿನಗಳಲ್ಲಿ 700 ಕಿ.ಮೀ .ಪಾದಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ. ಫೇ.2 ರಂದು ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ಸಮುದಾಯದವರ ಬೃಹತ್ ಸಮಾವೇಶವನ್ನು ಅಯೋಜಿಸಿ ನಮ್ಮ ಬೇಡಿಕೆಗಳ ಕುರಿತು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಶಿವರಾಜ ನಾಯಕ, ಸಮುದಾಯದ ಮುಖಂಡರಾದ ಶ್ರೀರಾಮುಲು ನೀರಮಾನ್ವಿ, ಲಕ್ಷ್ಮಣ ಮಾನ್ವಿ, ಹನುಮಂತ ವಲ್ಕಂದಿನ್ನಿ, ಚಂದ್ರಶೇಖರ, ಆಶೋಕ ಚಾಗಬಾವಿ, ಆಶೋಖ ಮುಸ್ಟೂರು, ಶರಣಬಸವ ನೀರಮಾನ್ವಿ, ಸತ್ಯಪ್ಪ ಮಾನ್ವಿ, ಗುರುರಾಜ ಜೂಕುರು, ಎಸ್.ರಂಗನಾಥ, ವಿನೋದ,ದೇವಪ್ಪ ಸಾದಪೂರ ಸೇರಿದಂತೆ ಇನ್ನಿತರರು ಇದ್ದರು.

## ಶಾಸಕದ್ವಯರು ಅಧಿವೇಶನದಲ್ಲಿ ಸಿಂಧನೂರು ಜಿಲ್ಲಾ ಕೇಂದ್ರವಾಗಲು ಧ್ವನಿ ಎತ್ತಲು ಕರವೇ ಒತ್ತಾಯ

ಕಟ್ಟಿಕೊಂಡು ಸಂತೃಪ್ತ ಜೀವನ ನಡೆಸುತ್ತಿದ್ದಾರೆ. ಜಿಲ್ಲಾ ಕೇಂದ್ರವನ್ನಾಗಿಸುವ ನಿಟ್ಟಿನಲ್ಲಿ ಎಂಜಿನಿಯರಿಂಗ್, ಡಿಪ್ಲೊಮಾ, ಎಂಜಿನಿಯರಿಂಗ್ ಕಾಲೇಜುಗಳು ಸೇರಿದಂತೆ ಜಿಲ್ಲಾ ಆಸ್ಪತ್ರೆಯೂ ಸಹ ಅಗತ್ಯವಿದ್ದು, ಇವುಗಳ ಬಗ್ಗೆ ನಮ್ಮ ಶಾಶಕದ್ವಯರು ಗಮನ ಹರಿಸಬೇಕು ಎಂದರು.

ನಂತರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ ಭಜಂತ್ರಿ ಮಾತನಾಡಿ, ವಿಧಾನ ಮಂಡಲದ ಜಂಟಿ ಅಧಿವೇಶನದಲ್ಲಿ ಹಾಲಿ ಶಾಸಕರು, ಹಾಗೂ ವಿಧಾನ ಪರಿಷತ್ ಸದಸ್ಯರು ಧ್ವನಿ ಎತ್ತಿ ಸರ್ಕಾರದ ಗಮನ ಸೆಳೆಯಬೇಕಾಗಿದೆ. ಅಲ್ಲದೇ ಮಾಜಿ ಸಚಿವರು, ಸಂಸದರು, ಶಾಸಕರು, ಸರ್ಕಾರಕ್ಕೆ ಪತ್ರ ಬರೆದು ಈ ಭಾಗದ ಜನರ ಬಹುದಿನಗಳ ಬೇಡಿಕೆ ಈಡೇರಿಸಲು ಆಗ್ರಹಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ: ತಾಲೂಕು ಅಧ್ಯಕ್ಷ ಎಲ್.ರಾಜಾಸಾಬ್ ಗಾಂಧಿನಗರ, ನಗರ ಘಟಕದ ಅಧ್ಯಕ್ಷರಾದ ಆರ್.ಎಕ್ಸ್.ಸುರೇಶ, ತಾಲೂಕು ಉಪಾಧ್ಯಕ್ಷ ಬಸವರಾಜ, ಎಸ್.ಎಸ್.ಪಾಷಾ, ಸೇರಿದಂತೆ ಅನೇಕರಿದ್ದರು.

## ತಾ. ಕಾಂಗ್ರೆಸ್ ಪಕ್ಷದ ವಕ್ತಾರರಾಗಿ ರಾಜು ನಾಯಕ ನೇಮಕ



ಯುವಮಾರ್ಗ ಸುದ್ದಿ

**ಅರಕೇರಾ,ಜ.17–** ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅರಕೇರಾ ತಾಲೂಕಿನ ಕಾಂಗ್ರೆಸ್ ಪಕ್ಷದ ನೂತನ ವಕ್ತಾರರನ್ನಾಗಿ ಪಟ್ಟಣದ ನಿವಾಸಿ ರಾಜಕುಮಾರ ತಂದೆ ಕರಿಯಣ್ಣ ಇವರನ್ನು ನೇಮಕ ಮಾಡಿದ್ದಾರೆ.

ಪಕ್ಷದ ಸಂಘಟನೆ ತತ್ವ, ಸಿದ್ಧಾಂತ ,ನೀತಿ ಮತ್ತು ನಿಯಮಗಳನ್ನು ಅನುಸರಿಸಿಕೊಂಡು ಹಲವು ವರ್ಷಗಳಿಂದ ಪಕ್ಷದ ಸಂಘಟನೆಯಲ್ಲಿ. ಸಕ್ರಿಯವಾಗಿ ತೊಡಗಿಸಿಕೊಂಡು ಸೇವೆ ಸಲ್ಲಿಸಿದ್ದನ್ನು ಪರಿಗಣಿಸಿ, ಈ ಜವಬ್ದಾರಿಯನ್ನು ವಹಿಸಿಕೊಂಡು ಕಾಂಗ್ರೆಸ್ ಪಕ್ಷವನ್ನು ಮುಂಬರುವ ಚುನಾವಣೆಗಳಲ್ಲಿ ಇನ್ನಷ್ಟು ಬಲವರ್ಧನೆಗೆ ಶ್ರಮಿಸುವಂತೆ ಸೂಚಿಸುವ ಮೂಲಕ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಬಸವರಾಜ ಪಾಟೀಲ್ ಇಟಗಿಯವರು ಆದೇಶ ಹೊರಡಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಬಸವರಾಜ ಪೂಜಾರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರೇಶ್ ನಾಯಕ ಶಾಖೆ, ಶಂಕ್ರಪ್ಪ ಪವಾರ್ ಬಂಡೇಗುಡ್ಡ, ರಂಗಪ್ಪ ತುಮನಮರಡಿ, ಸೂಗೂರೇಶ ಹೂಗಾರ,ರಾಘವೇಂದ್ರ ಪೂಜಾರಿ, ರಂಗಪ್ಪ ಜಾಲಹಳ್ಳಿ ಇವರುಗಳು ಅಭಿನಂದಿಸಿದರು.

ಮಸ್ಕಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಆರ್ ಸಿದ್ದನಗೌಡರಿಂದ ರೈತರಿಗೆ ತಾಡಪಲ್ ವಿತರಣೆ

## ಸರ್ಕಾರದ ಯೋಜನೆಗಳು ರೈತರಿಗೆ ಸಕಾಲದಲ್ಲಿ ತಲುಪುವಂತೆ ಅಧಿಕಾರಿಗಳು ಗಮನಹರಿಸಿ – ಆರ್. ಸಿದ್ದನಗೌಡ





ಯುವಮಾರ್ಗ ಸುದ್ದಿ

**ಮಸ್ಕಿ,ಜ.17–** ಸರ್ಕಾರ ರೈತರಿಗಾಗಿ ಬೀಜ, ಗೊಬ್ಬರ ಸೇರಿದಂತೆ ಹಲವಾರು ಸಬ್ಸಿಡಿ ಯೋಜನೆ ಗಳನ್ನು ನೀಡುತ್ತಿದ್ದು ಅವುಗಳನ್ನು ಸದುಪಯೋ ಗಪಡಿಸಿಕೊಂಡು ರೈತರು ಆರ್ಥಿಕವಾಗಿ ಸದೃಢ ರಾಗಬೇಕು ಎಂದು ಮಸ್ಕಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಆರ್ ಸಿದ್ದನಗೌಡ ತುರುವಿಹಾಳ ಹೇಳಿದರು.

ಮಸ್ಕಿ ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ರೈತರಿಗೆ ಶನಿವಾರ ತಾಡಪಲ್ ಗಳನ್ನು ವಿತರಿಸಿ ನಂತರ ಮಾತನಾಡಿದ ಅವರು ಸರ್ಕಾರದಲ್ಲಿ ದೊರೆಯುವಂತ ಸಬ್ಸಿಡಿ ಯೋಜನೆಗಳನ್ನು ರೈತರಿಗೆ ಸಕಾಲದಲ್ಲಿ ವಿತರಿಸುವ ಅಗತ್ಯ ಕ್ರಮಗಳನ್ನು ಕೃಷಿ ಅಧಿಕಾರಿಗಳು ಕೈಗೊಳ್ಳಬೇಕು ಹಾಗೂ ಯಾವುದೇ ರೀತಿಯಲ್ಲಿ ರೈತರಿಗೆ ಅಲೆದಾಡಿಸುವ ಕೆಲಸ ಮಾಡಬಾರದು ಎಂದು ಹೇಳಿದರು. ರೈತರಿಗಾಗಿ ಬರುವ ಯಾವುದೇ ಯೋಜನೆಗಳಿರಲಿ ವಿಳಂಬ ಮಾಡದೆ ರೈತರಿಗೆ ತಲುಪಿಸುವ ಕೆಲಸ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳು ಮಾಡ ಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ವಿವಿಧ ಮುಖಂಡರು ಇದ್ದರು.

### ಗ್ರಂಥಾಲಯಕ್ಕೆ ಆರ್ ಸಿದ್ದನಗೌಡ ಭೇಟಿ. ಮೂಲಸೌಕರ್ಯ ಪರಿಶೀಲನೆ

ಮಸ್ಕಿ ಪಟ್ಟಣದಲ್ಲಿರುವ ಹೈಟೆಕ್ ಡಿಜಿಟಲ್ ಗ್ರಂಥಾಲಯಕ್ಕೆ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಆರು ಸಿದ್ದನಗೌಡ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಗ್ರಂಥಾಲಯಕ್ಕೆ ಬರುವ ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲ ಸೌಲಭ್ಯಗಳು ಒದಗಿಸಿ ವಿದ್ಯಾರ್ಥಿಗಳಿಗೆ ಓದಲು ತೊಂದರೆಯಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಗ್ರಂಥಾಲಯದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅಲ್ಲದೆ ವಿದ್ಯಾರ್ಥಿಗಳು ಸಹ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ಅತ್ಯಂತ ಮುತುವರ್ಜಿ ವಹಿಸಿ ಓದಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಗ್ರಂಥಾಲಯದ ಅಧಿಕಾರಿಗಳು ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

## ಶಿಕ್ಷಕಿ ಸುಧಾಬಾಯಿ ವಯೋ ನಿವೃತ್ತಿ ಹಾಗೂ ಸಿ ಆರ್ ಪಿ ಸಂತೋಷ್ ವರ್ಗಾವಣೆ ಕಾರ್ಯಕ್ರಮ

ಯುವಮಾರ್ಗ ಸುದ್ದಿ



**ಗಿಲ್ಲೆಸೂಗೂರು,ಜ.17–**ಶನಿವಾರ ಸರ್ಕಾರಿ ಮಾದರಿಯ ಹಿರಿಯ ಪ್ರಥಮಿಕ ಶಾಲೆ ಗಿಲ್ಲೆಸೂಗೂರು ಶಾಲೆಯ ಶಿಕ್ಷಕಿಯಾದ ಸುಧಾಬಾಯಿ ವಯೋ ನಿವೃತ್ತಿಯು ಡಿ.31 2025 ರಂದು ಹೊಂದಿದ್ದರು, ಆ ದಿನದಂದು ಕಾರಣಾಂತರಗಳಿಂದ ವಯೋನಿವೃತ್ತಿ ಕಾರ್ಯಕ್ರಮವನ್ನು ಮುಂದೂಡಲಾಗಿತ್ತು. ಆದ್ದರಿಂದ ಶನಿವಾರದಂದು ಕಾರ್ಯಕ್ರಮ ವನ್ನು ಸರಕಾರಿ ಮಾದರಿಯ ಹಿರಿಯ ಪ್ರಥಮಿಕ ಶಾಲೆ ಮುಖ್ಯ ಗುರುಗಳಾದ ಈಶ್ವರಯ್ಯ ಅವರು ಹಮ್ಮಿಕೊಂಡಿದ್ದರು. ಶ್ರೀಮತಿ ಸುಧಾಬಾಯಿ ಅವರನ್ನು ಬಿಳ್ಕೊಡುಗೆ ಜೋತೆಗೆ ಸಿ ಆರ್ ಪಿ ಸಂತೋಷ್ ಅವರನ್ನು ವರ್ಗಾವಣೆ ಕಾರ್ಯಕ್ರಮವನ್ನು ಇದೆ ಸಂದರ್ಬದಲ್ಲಿ ಹಮ್ಮಿಕೊಳ್ಳಲಾಗಿತ್ತು

ಈ ಸಂದರ್ಭದಲ್ಲಿ ಕೃಷ್ಣಮೂರ್ತಿ ಸಿ ಆರ್ ಪಿ ಗಫೂರ್ ಶ್ರೀಮತಿ ಮೀನಾಕ್ಷಿ, ರಾಘವೇಂದ್ರ, ಇರ್ಫಾನ್ SDMC ಚಂದ್ರಕಲಾ , ಸಾವಿತ್ರಿಮ, ಗುರುಸ್ವಾಮಿ ನಾಯಕ, ಸುಧಾಬಾಯಿ ಪಾಂಡುರಂಗ ರಾವ್, ಹರ್ಷಿತ ಭೋಗೇಶ್, ರಂಗನಾಥ ರಾವ್, ಸತೀಶ್ ಕುಲಕರ್ಣಿ ಮತ್ತು ಊರಿನ ಮುಖಂಡರು ಯುವಕರು ಮುದ್ದು ಮಕ್ಕಳು ಶಿಕ್ಷಕ ವೃಂದದವರು ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

ಹಿಟ್ನಾಳ, ಬಸನಗೌಡರಿಂದ ಹೆದ್ದಾರಿ ಕಾಮಗಾರಿ ಪರಿಶೀಲನೆ

## ಹೆದ್ದಾರಿಗೆ ಭೂಮಿ ಕಳೆದುಕೊಂಡ ರೈತರಿಗೆ ಭೂ–ಪರಿಹಾರ ನೀಡಿ: ಹಿಟ್ನಾಳ



ಯುವಮಾರ್ಗ ಸುದ್ದಿ

**ಮಸ್ಕಿ,ಜ.17–**ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗೆ ಭೂಮಿ ಕಳೆದುಕೊಂಡ ರೈತರಿಗೆ ಕೂಡಲೇ ಹೆದ್ದಾರಿ ಪ್ರಾಧಿಕಾರದಿಂದ ಬೆಳೆ ಪರಿಹಾರ ಮತ್ತು ಭೂ–ಪರಿಹಾರ ನೀಡಬೇಕೆಂದು ಪ್ರಾಧಿಕಾರ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ಸಂಸದ ರಾಜಶೇಖರ ಹಿಟ್ನಾಳ ಖಡಕ್ ಸೂಚನೆ ನೀಡಿದ್ದಾರೆ.

ತಾಲೂಕಿನ ಸಂತೆಕೆಲ್ಲೂರು ಹೊರವಲಯದಲ್ಲಿ ನಡೆದಿರುವ 748ಎ ಭಾರತ ಮಾಲಾ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಸಂಸದ ಮತ್ತು ಶಾಸಕ ಆರ್.ಬಸನಗೌಡ ತುರವಿಹಾಳ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು. ನಂತರ ಹೆದ್ದಾರಿಗಾಗಿ ಭೂಮಿ ಮತ್ತು ಬೆಳೆ ಕಳೆದಕೊಂಡ ಗೋನವಾರ ರೈತರು ಪರಿಹಾರ ನೀಡಿಲ್ಲವೆಂದು ಸಂಸದರಿಗೆ ದೂರು ನೀಡಿದ ಮೇಲೆ ರೈತರಿಗೆ ಪರಿಹಾರ ನೀಡದೆ ಹೇಗೆ ಕೆಲಸ ಆರಂಭ ಮಾಡಿದ್ದೀರಿ ಮೊದಲು ರೈತರಿಗೆ ಪರಿಹಾರ ಕೊಡಿ, ಪರಿಹಾರ ನೀಡುವಲ್ಲಿ ತಾರತಮ್ಯ ಮಾಡುತ್ತಿದ್ದಾರೆಂಬ ದೂರುಗಳು ಕೇಳಿ ಬರುತ್ತಿವೆ. ಹೆದ್ದಾರಿ ಕಾಮಗಾರಿ ಸಲುವಾಗಿ ಭೂಮಿ ಮತ್ತು ಬೆಳೆ ಕಳೆದುಕೊಂಡ ರೈತರ ಜಮೀನುಗಳನ್ನು ಕೂಡಲೇ ಜಂಟಿಯಾಗಿ ಸರ್ವೆ ನಡೆಸಿ ಪರಿಹಾರ ವಂಚಿತ ರೈತರಿಗೆ ಪರಿಹಾರ ನೀಡಬೇಕೆಂದರು.

ನಂತರ ಶಾಸಕ ಆರ್. ಬಸನಗೌಡ ಮಾತನಾಡಿ ಭೂಮಿ ಕಳೆದಕೊಂಡ ರೈತರಿಗೆ ಭೂ ಪರಿಹಾರ ನೀಡದೇ ಕಾಮಗಾರಿಯನ್ನು ಆರಂಭಿಸಿದ್ದರಿಂದ ಇಂತಹ ಸಮಸ್ಯೆ ಎದುರಿಸಬೇಕಾಗಿದೆ. ಜಂಟಿಯಾಗಿ ಸರ್ವೆ ಕಾರ್ಯ ನಡೆಸದೇ ಭೂಮಿ ಹೇಗೆ ವಶಕ್ಕೆ ತೆಗೆದುಕೊಂಡು ಕೆಲಸ ಆರಂಭಿಸಿದ್ದಿರಿ ಎಂದು ದೂರಿದರು.

ಪರಿಹಾರ ನೀಡುವಲ್ಲಿ ತಾರತಮ್ಯ ಮಾಡದೆ ನೀರಾವರಿ ಇಲಾಖೆಯ ನೋಟಿಪಿಕೇಶ ಪ್ರಕಾರ ರೈತರಿಗೆ ಪರಿಹಾರ ನೀಡಿ. ಪರಿಹಾರಕ್ಕಾಗಿ ರೈತರನ್ನು ಕೋರ್ಟ್‌ರೆಗೂ ಅಲೆದಾಡಿಸುವ ಕೆಲಸ ಮಾಡಬೇಡಿ ಎಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಲಿಂಗಸ್ಗೂರು ಸಹಾಯಕ ಆಯುಕ್ತ ಬಸವಣ್ಣಪ್ಪ ಕಲಶೆಟ್ಟಿ, ತಹಸೀಲ್ದಾರ್ ಮಂಜುನಾಥ ಬೋಗಾವತಿ, ಭೂ–ಸ್ವಾಧೀನ ಅಧಿಕಾರಿ ಗುರುಸಿದ್ದಯ್ಯ, ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಸಿದ್ರಾಮಪ್ಪ ಸಾಹುಕಾರ, ಹೆಚ್.ಬಿ.ಮುರಾರಿ, ಸಿಪಿಐ ರಾಮಪ್ಪ ಜಳಗೇರಿ ಸೇರಿದಂತೆ ಇನ್ನಿತರರಿದ್ದರು.

ಹೈಲೇಟ್ಸ್ : * ಅಮಾಯಕ ರೈತರಿಗೆ ಪೊಲೀಸರಿಂದ ಕಿರುಕುಳ ನೀಡಿದ ಆರೋಪ. * ಹೆದ್ದಾರಿ ಪ್ರಾಧಿಕಾರದ ದೌರ್ಜನ್ಯಕ್ಕೆ ಭೂಮಿ ಕಳೆದುಕೊಂಡ ಕಂಗಾಲಾದ ಗೋನವಾರ ರೈತರು * ಭೂ ಮತ್ತು ಬೆಳೆ ಪರಿಹಾರ ನೀಡುವಲ್ಲಿ ತಾರತಮ್ಯ ಆರೋಪ * ಪರಿಹಾರ ಕೇಳಲೋದ ರೈತರಿಗೆ ಬಂಧನದ ಭೀತಿ * ಗುತ್ತಿಗೆದಾರರ ತಾಳಕ್ಕೆ ತಕ್ಕಂತೆ ಕುಣಿಯುತ್ತಿರುವ ಜಿಲ್ಲಾಡಳಿತ

# ಭಾರತದ ಅಸ್ಮಿತೆಯೇ ನಮ್ಮ ಧರ್ಮ, ಸಂಸ್ಕೃತಿ: ಶೋಭಾ ಕರಂದ್ಲಾಜೆ

**ಮೈಸೂರು: ಜ.17:–** ಭಾರತದ ಆತ್ಮ ಆಧ್ಯಾತ್ಮ. ಆಧ್ಯಾತ್ಮ ಹೊರತು ಪಡಿಸಿದ ಭಾರತವಿಲ್ಲ. ಭಾರತದ ಅಸ್ತಿತ್ವವೇ ನಮ್ಮ ಧರ್ಮ, ಸಂಸ್ಕೃತಿ ಎಂದು ಕೇಂದ್ರ ಕಾರ್ಮಿಕ, ಉದ್ಯೋಗ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅಭಿಪ್ರಾಯಪಟ್ಟರು.

ಸುತ್ತೂರಿನಲ್ಲಿ ನಡೆಯುತ್ತಿರುವ ಶಿವರಾತ್ರೀಶ್ವರ ಶಿವಯೋಗಿಗಳ ಜಾತ್ರಾ ಮಹೋತ್ಸವದಲ್ಲಿ ಶುಕ್ರವಾರ ರಾಜ್ಯಮಟ್ಟದ ಭಜನಾ ಮೇಳ, ದೇಸಿ ಆಟಗಳು, ಸೋಬಾನೆ ಪದ, ರಾಗಿ ಬೀಸುವ ಸ್ಪರ್ಧೆ ಹಾಗೂ ರಂಗೋಲಿ ಸ್ಪರ್ಧೆ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಧರ್ಮ, ಸಂಸ್ಕೃತಿಯೇ ದೇಶದ ಆತ್ಮ. ಆಧ್ಯಾತ್ಮ, ಆಚಾರ ವಿಚಾರ, ಹಬ್ಬ ಹರಿದಿನಗಳು ದೇಶದ ಆತ್ಮದಲ್ಲಿ ಬೆರೆತಿವೆ. ಸುತ್ತೂರು ಮಠ ಕೇವಲ ಕರ್ನಾಟದಲ್ಲಿ ಮಾತ್ರವಲ್ಲದೆ ಅಮೆರಿಕಾ, ಮಾರಿಷಸ್, ದುಬೈನಲ್ಲೂ ದೇವಸ್ಥಾನ ನಿರ್ಮಿಸಿ ನಮ್ಮ ಸಂಸ್ಕೃತಿ, ಆಧ್ಯಾತ್ಮ, ಪರಂಪರೆಯನ್ನು ವಿಶ್ವಕ್ಕೆ ಪಸರಿಸುವ ಕೆಲಸ ಮಾಡುತ್ತಿದೆ ಎಂದು ಶ್ಲಾಘಿಸಿದರು.

ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮಠದ ಕೆಲಸಗಳ ಜತೆಗೆ ಈ ಭಾಗದ ಗ್ರಾಮೀಣ ಜನತೆಗೆ ಅಗತ್ಯ ಮಾಹಿತಿ ಜ್ಞಾನವನ್ನೂ ನೀಡುವ ಮಹತ್ಕಾರ್ಯ ಮಾಡುತ್ತಿದ್ದಾರೆ. ಜಾತ್ರೆಯಲ್ಲಿ ಸರ್ಕಾರದ ಸಂಸ್ಥೆಗಳ ಮಾಹಿತಿ ಇದೆ. ಸರ್ಕಾರವೇ ಎಲ್ಲವನ್ನೂ ಮಾಡಲು ಸಾಧ್ಯವಿಲ್ಲ. ಹೀಗಾಗಿ ಶ್ರೀಮಠ ಸರ್ಕಾರದ ಕಾರ್ಯಕ್ರಮಗಳನ್ನು ಮಠದ ಮೂಲಕ ಜನರಿಗೆ ತಲುಪಿಸುತ್ತಿದೆ ಎಂದು ಹೇಳಿದರು.



ಸುತ್ತೂರು ಜಾತ್ರೆಗೆ ಬರುವುದೇ ಖುಷಿಯ ಸಂಗತಿ ಹಾಗೂ ಹೆಮ್ಮೆ. ಇಲ್ಲಿ ನಮಗೆ ಬೇಕಾದ್ದನ್ನು ಖರೀದಿಸುವುದರೊಂದಿಗೆ ಬುದ್ದಿಯನ್ನೂ ಕೊಂಡೊಯ್ಯಬಹುದು. ಜಾತ್ರೆಯಲ್ಲಿ ವಸ್ತು ಪ್ರದರ್ಶನ, ಗ್ರಾಮೀಣ ಕ್ರೀಡೆ, ಯೋಗ, ಕುಸ್ತಿ, ಆರೋಗ್ಯ ಸೇರಿದಂತೆ ಹತ್ತು ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಯಾವ್ಯಾವ ಕ್ಷೇತ್ರದಲ್ಲಿ ಆಸಕ್ತಿ ಇದೆ ಅವರು ತಮ್ಮ ನೆಚ್ಚಿನ ಕ್ಷೇತ್ರದಲ್ಲಿ ಜ್ಞಾನ ಪಡೆದುಕೊಳ್ಳಬಹುದು. ಎಂದರು.

ಸಂಸದ ತೇಜಸ್ವಿ ಸೂರ್ಯ ಮಾತನಾಡಿ, ಸಮಾಜದಲ್ಲಿ ಯಾವ ಯಾವ ಆಯಾಮಗಳಲ್ಲಿ ಕೆಲಸ ಮಾಡಬಹುದು ಎಂಬುದಕ್ಕೆ ಸುತ್ತೂರು ಮಠ ದೊಡ್ಡ ಉದಾಹರಣೆ. ಶಿಕ್ಷಣ ಕ್ಷೇತ್ರ ಮಾತ್ರವಲ್ಲದೆ ರೈತರಿಗೆ ಬೇಕಾಗುವ ಹಲವು ಕಾರ್ಯಗಳನ್ನು ಶ್ರೀಮಠ ಮಾಡಿದೆ. ನೀರಿನ ಅಗತ್ಯತೆ ಅರಿತು, ಸರ್ಕಾರದ ಗಮನಕ್ಕೆ ತಂದು ಈ ಭಾಗದ ಸುತ್ತಮುತ್ತಲ ಗ್ರಾಮದ ಕೆರೆಗಳನ್ನು ತುಂಬಿಸುವ ಭಗೀರಥ ಪ್ರಯತ್ನವನ್ನು ಶ್ರೀಗಳು ಮಾಡಿದ್ದಾರೆ. ಚಿಕ್ಕ ಮಕ್ಕಳಿನಿಂದ ದೊಡ್ಡವರವರೆಗೂ ಶಿಕ್ಷಣ, ಆರೋಗ್ಯ, ಸಂಗೀತ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಆದರ್ಶ ಪ್ರಾಯವಾಗಿ ಕೆಲಸ ಮಾಡುತ್ತಿದ್ದಾರೆ ಎಂದರು.

ಸಂಸ್ಕೃತಿ, ಪರಂಪರೆ ಪಸರಿಸಿದ ಶ್ರೀಗಳು: 12 ವರ್ಷದ ಬಾಲಕನಾಗಿದ್ದಾಗ ಪೀಠಾಧಿಪತಿಯಾದ ಶ್ರೀಗಳು ಇಂದು ವಿಶ್ವಕ್ಕೆ ನಮ್ಮ ಸಂಸ್ಕೃತಿ ಪರಂಪರೆ ಪಸರಿಸಿದ್ದಾರೆ. ಬಹಳಷ್ಟು ವರ್ಷಗಳ ಕಾಲ ನಮ್ಮ ಪರಂಪರೆ ಕ್ಷೀಣಿಸಲು ಕಾರಣ ನಾವು ಬೇರೆ ದೇಶಗಳಿಗೆ ತಿಳಿಸದಿರುವುದು. ಇದನ್ನು ಅರಿತ ಸ್ವಾಮಿ ವಿವೇಕಾನಂದರು ಅಮೆರಿಕಾದ ಷಿಕಾಗೋ ಸಮ್ಮೇಳನದಲ್ಲಿ ನಮ್ಮ ಪರಂಪರೆ ಮಹತ್ವ ಸಾರಿದರು. ಅದನ್ನು ಸುತ್ತೂರು ಶ್ರೀಗಳು ಮುಂದುವರಿಸಿದ್ದಾರೆ. ಮುಸ್ಲಿಂ ಬಾಹುಳ್ಯದ ದುಬೈ, ಚರ್ಚಗಳೇ ಮುಚ್ಚುತ್ತಿರುವ ಅಮೆರಿಕಾದಲ್ಲೂ ದೇವಸ್ಥಾನ ತೆರೆಯುತ್ತಿದ್ದಾರೆ. ಈ ಮೂಲಕ ಸನಾತನ ಧರ್ಮವನ್ನು ಎತ್ತರಕ್ಕೆ ಕೊಂಡೊಯ್ದು, ನಮ್ಮ ಸಂಸ್ಕೃತಿ ಪರಂಪರೆ ಪಸರಿಸುತ್ತಿದ್ದಾರೆ ಎಂದು ಸಂಸದ ತೇಜಸ್ವಿ ಸೂರ್ಯ ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉಡುಪಿಯ ಸೋದೆ ಮಠದ ವಿಶ್ವವಲ್ಲವ ತೀರ್ಥ ಸ್ವಾಮೀಜಿ, ಎಂಸಿಸಿಐ ಅಧ್ಯಕ್ಷ ಕೆ.ಬಿ.ಲಿಂಗರಾಜು, ಸೇರಿದಂತೆ ಹಲವರು ಭಾಗವಹಿಸಿದ್ದರು.

# ಮಾಧ್ಯಮಗಳು ಬದ್ಧತೆಯಿಂದ ಕೆಲಸ ನಿರ್ವಹಿಸಲಿ: ಉಪ ಕುಲಪತಿ ಬಿ.ಕೆ.ರವಿ



**ಕೋಲಾರ,ಜ.17–:** ಮಾಧ್ಯಮಗಳು ವೃತ್ತಿಯಲ್ಲಿ ಬದ್ಧತೆ ಹೊಣೆಗಾರಿಕೆಯಿಂದ ಕೆಲಸ ನಿರ್ವಹಿಸುವ ಮೂಲಕ ಸಮಾಜವನ್ನು ಬಲಿಷ್ಟವಾಗಿ ಹಾಗೂ ಆರೋಗ್ಯಕರವಾಗಿ ರೂಪಿಸಲು ಸಾಧ್ಯ ಎಂದು ಬೆಂಗಳೂರು ಉತ್ತರ ವಿಶ್ವವಿದ್ಯಾಯಲು ಉಪಕುಲಪತಿ ಬಿ.ಕೆ.ರವಿ ಅಭಿಪ್ರಾಯಪಟ್ಟರು.

ನಗರದ ಪತ್ರಕರ್ತರ ಭವನದಲ್ಲಿ ಸಂಘದ ವತಿಯಿಂದ ಆಯೋಜಿಸಿದ್ದ ಪ್ರಸಕ್ತ ಸಾಲಿನ ಪತ್ರಿಕೋದ್ಯಮದ ಸವಾಲುಗಳು ಅದಕ್ಕೆ ಪತ್ರಕರ್ತರ ಮುಂದಿರುವ ಆಯ್ಕೆಗಳ ವಿಷಯದ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಮಾಧ್ಯಮಗಳು ಮನಸ್ಸು ಮಾಡಿದರೆ ಬದಲಾವಣೆ ತರಲು ಸಾಧ್ಯ ಎಂಬುವುದಕ್ಕೆ ಪಲ್ಸ್ ಪೋಲಿಯೋ ಹಾಗೂ ಕುಷ್ಟ ರೋಗ ನಿಯಂತ್ರಣದ ಜಾಗೃತಿಯನ್ನು ಸಮಾಜದಲ್ಲಿ ಪ್ರಚಾರ ಪಡಿಸುವ ಮೂಲಕ ಮುಕ್ತಗೊಳಿಸುವಲ್ಲಿ ಯಶಸ್ವಿಗೊಳಿಸಿರುವುದನ್ನು ಉದಾಹರಿಸಿದ ಅವರು ಆರೋಗ್ಯಕಾರಿ ಮಾಧ್ಯಮಗಳಿಂದ ಆರೋಗ್ಯಕಾರಿ ಸಮಾಜ ನಿರ್ಮಾಣ ಸಾಧ್ಯ ಹಾಗಾಗಿ ಆರೋಗ್ಯಕಾರಿ ಸಮಾಜ ನಿರ್ಮಾಣಕ್ಕೆ ಮಾಧ್ಯಮಗಳು ಕೈ ಜೋಡಿಸುವಂತಾಗ ಬೇಕೆಂದು ಕರೆ ನೀಡಿದರು.

ಕಳೆದ 1980 ರಿಂದ 2025ರ ವರೆಗಿನ ಬಹಳಷ್ಟು ಭಾಷ ಮಾಧ್ಯಮದಲ್ಲೂ ಬದಲಾವಣೆಗಳನ್ನು ಕಂಡಿದೆ. ಕನ್ನಡ ಮಾಧ್ಯಮವು ಭಾರತೀಯ ಮಾಧ್ಯಮಕ್ಕೆ ಸಾಕಷ್ಟು ಕೊಡುಗೆಗಳನ್ನು ನೀಡಿದೆ. ಭಾಷಾಂತರ ತಂತ್ರಜ್ಞಾನ ಜಾಗತೀಕರಣದ ಅಲೆಯಲ್ಲಿ ಮಾಧ್ಯಮಗಳು ವಾಣಿಜ್ಯಕರೀಣ ಭರಾಟೆಯಲ್ಲಿ ಸ್ವಾತಂತ್ರ್ಯ ಪೂರ್ವ ಹಾಗೂ ನಂತರದಲ್ಲಿ ಸಾಕಷ್ಟು ಬದಲಾವಣೆಯಾಗಿ ಅಧುನೀಕರಣಗೊಂಡಿದೆ. ತಂತ್ರಜ್ಞಾನ ಜಾಗತೀಕರಣದಲ್ಲಿ ಭಾರತವು ವಿಶ್ವದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ. ಮನರಂಜನ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಿವಿಧ ದೇಶಗಳು ಭಾರತೀಯ ಮಾಧ್ಯಮಗಳಲ್ಲಿ ಹೂಡಿಕೆ ಮಾಡಲು ಸರದಿ ಸಾಲಿನಲ್ಲಿ ನಿಂತಿದೆ ಎಂದು ಉದಾಹರಿಸಿದರು.

ಇಂದು ಅಧುನಿಕ ತಂತ್ರಜ್ಞಾನವು ಬಹಳಷ್ಟು ಮುಂದುವರೆದಿದ್ದರೂ ಸಹ ಮಾನವನ ಮೆದುಳಿಗೆ ಸಮಾನವಾಗದು ಎ.ಐ. ಹಾಗೂ ಬುದ್ದಿ ಮತ್ತೆ ಎರಡರ ನಡುವೆ ಮಾನವನಿಗೆ ಸ್ಪರ್ಧೆ ಇದ್ದರೂ ಸಮಾನಾಗಿ ಬರುವುದಿಲ್ಲ, ಎ,ಐ. ವೇಗವಾಗಿ ಕೆಲಸ ಮಾಡಿ ಸಮಯವನ್ನು ಉಳಿಸ ಬಹುದಾಗಿದೆ. ಸಮಾಜದ ಮೇಲೆ ಪರಿಣಾಮ ಬೀರುವಂತೆ ಪ್ರಚೋದಕಾರಿ ಪ್ರಕರಣಗಳನ್ನು ವೈಭವೀಕರಿಸುವುದು ಸಲ್ಲದು. ಅಧುನೀಕ ತಂತ್ರಜ್ಞಾನಗಳನ್ನು ಅರ್ಥಪೂರ್ಣವಾಗಿಸಿಕೊಂಡು ಸದ್ಬಳಿಸಿಕೊಂಡಾಗ ಮಾತ್ರ ಸಾರ್ಥಕತೆ ಉಂಟಾಗಲಿದೆ ಇದು ನಮ್ಮನ್ನು ಅವಲಂಭಿಸಿದೆ. ಮಾಧ್ಯಮ ಲೋಕಕ್ಕೆ ಪೂರಕವಾಗಲಿದೆ ಹೊರತಾಗಿ ಮಾರಕವಾಗದು ಎಂದರು.

ಯಾರು ಸೃಜನಶೀಲತೆಯ ಪರಿಶ್ರಮ, ಶಿಸ್ತು, ಬದ್ದತೆ ಇರುವವರನ್ನು ಗುರುತಿಸಿ ಮಾಧ್ಯಮಗಳನ್ನು ಸಮಾಜವು ಸ್ವೀಕರಿಸಲಿದೆ. ಯಾವೂದೇ ವರದಿಗಳು ವಸ್ತುನಿಷ್ಟತೆಯಿಂದ, ಸತ್ಯಕ್ಕೆ ಸಮೀಪವಾಗಿರಬೇಕು ಟಿ.ವಿ.ಗಳು ಬಂದ ನಂತರವೂ ಮುದ್ರಣ ಮಾಧ್ಯಮಗಳು ಬಲಷ್ಟವಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಪತ್ರಿಕೆಗಳು ಬಿಡುಗಡೆಯಾಗುತ್ತಿರುವುದನ್ನು ಕಾಣಬಹುದಾಗಿದೆ. ಮುದ್ರಣ ಮಾಧ್ಯಮಕ್ಕೆ ವಿದ್ಯುತ್‌ಮಾನ ಮಾಧ್ಯಮಗಳು, ಯೂ ಟ್ಯೂಬ್, ಸಾಮಾಜಿಕ ಜಾಲತಾಣಗಳು, ಸೇರಿದಂತೆ ಚಲನ ಚಿತ್ರಗಳು ವಾಣಿಜ್ಯೋದ್ಯಮಗಳು ಇಂದಿನ ಜಾಗತೀಕರಣದಲ್ಲಿ ಸ್ಪರ್ಧೆಗಳು ಇರುವುದು ಸಹಜ, ಯಾವುದೇ ತಂತ್ರಜ್ಞಾನಗಳು ಪರಿಚಿತವಾದ ಸಂದರ್ಭದಲ್ಲಿ ಸಮಾಜದಲ್ಲಿ ಬದಲಾವಣೆಗಳು ಸಹಜವಾದ ಪ್ರಕ್ರಿಯೆ ಆಗಿದೆ ಎಂದು ಹೇಳಿದರು.


ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಕೆ.ಚಂದ್ರಶೇಖರ್ ವಹಿಸಿ ಪ್ರಸ್ತಾವಿಕವಾಗಿ ಮಾತನಾಡಿ, ಇವತ್ತಿನ ಮಾಧ್ಯಮ ಕ್ಷೇತ್ರಕ್ಕೆ ಕಾರ್ಪೊರೇಟ್ ಕಂಪನಿಗಳು ಲಗ್ಗೆ ಇಟ್ಟಿರುವುದರಿಂದ ನೈಜ ಪತ್ರಕರ್ತರಿಗೆ ನೆಲೆ ಇಲ್ಲದಿರುವುದರಿಂದ ಜೀವನಕ್ಕೆ ಭದ್ರತೆ ಇಲ್ಲವಾಗಿದೆ. ಇದರಿಂದ ಉತ್ಸಾಹಿ ಪತ್ರಕರ್ತರು ಮಾಧ್ಯಮ ಕ್ಷೇತ್ರಕ್ಕೆ ಬರುವುದಕ್ಕೆ ಹಿಂಜರಿಯುತ್ತಿದ್ದಾರೆ ಎಂದರು. ಪತ್ರಕರ್ತರು ಸವಾಲುಗಳ ನಡುವೆ ವೃತ್ತಿಯನ್ನ ತೊಡಗಿಸಿಕೊಂಡು ಹೋಗುತ್ತಿದ್ದಾರೆ. ಅಲ್ಲದೆ ಇವತ್ತಿನ ದಿನಗಳಲ್ಲಿ ಪತ್ರಕರ್ತರಿಗೆ ಬರವಣಿಗೆಯ ಮೇಲೆ ಹಿಡಿತವಿಲ್ಲದೆ ದಾರಿ ತಪ್ಪುತ್ತಿದ್ದಾರೆ. ಬೆಂಗಳೂರು ಉತ್ತರ ವಿ.ವಿ ಯಿಂದ ಪತ್ರಕರ್ತರಿಗೆ ಕಾರ್ಯಗಾರಗಳು ಅವಶ್ಯಕತೆ ಇದೆ ಎಂದು ಹೇಳಿದರು.

ಸಂಘದ ಉಪಾಧ್ಯಕ್ಷ ಎಸ್. ರವಿಕುಮಾರ್ ಸ್ವಾಗತಿಸಿದರು. ವೇದಿಕೆಯಲ್ಲಿ ರಾಜ್ಯ ಕಾರ್ಯಕಾರಿಣಿ ಸದಸ್ಯ ವಿ.ಮುನಿರಾಜು, ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಎ.ಜಿ.ಸುರೇಶ್‌ಕುಮಾರ್, ಖಜಾಂಚಿ ಬಿ.ಎಲ್. ರಾಜೇಂದ್ರಸಿಂಹ ಉಪಸ್ಥಿತರಿದ್ದರು. ಸಂಘದ ನಿಕಟಪೂರ್ವ ಅಧ್ಯಕ್ಷ ಬಿ.ವಿ.ಗೋಪಿನಾಥ್, ಓಂಕಾರ ಮೂರ್ತಿ, ಸುನೀಲ್‌ಕುಮಾರ್, ಶಮ್ಗರ್, ಸುದರ್ಶನ್ ಮುಂತಾದವರು ಸಂವಾದದಲ್ಲಿ ಭಾಗವಹಿಸಿದ್ದರು.

# ರಸ್ತೆ ಅಪಘಾತ : ಮಾಜಿ ಸಚಿವ ರಾಜೂ ಗೌಡ ಪಾರು

**ಯಾದಗಿರಿ: ಜ.17–**ಸಿಸಿಎಲ್ ಪಂದ್ಯ ಮುಗಿಸಿ ಹೈದ್ರಾಬಾದದಿಂದ ಯಾದಗಿರಿ ಮೂಲಕ ತಮ್ಮ ಊರಿಗೆ ಬರುತ್ತಿದ್ದ ಮಾಜಿ ಸಚಿವ ರಾಜೂ ಗೌಡ ಅವರು ಪ್ರಯಾಣಿಸುತ್ತಿದ್ದ ಕಾರು ನಗರದ ಗಂಜ್ ಪ್ರದೇಶದಲ್ಲಿ ಹೈವೈ ರಸ್ತೆಯಲ್ಲಿ ಅಪಘಾತಕ್ಕಿಡಾಗಿದ್ದು, ಅದೃಷ್ಟವಶಾ ಅವರು ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ಕಳೆದ ಶುಕ್ರವಾರ ತಡರಾತ್ರಿ ನಡೆದಿದೆ. ನೆರೆಯ ವಿಶಾಖಪಟ್ಟಣ ದಿಂದ ಸೆಲೆಬ್ರಟಿ ಕ್ರಿಕೆಟ್ ಲೀಗ್ ಪಂದ್ಯ ಮುಗಿಸಿ ಹಿಂತಿರುವಾಗ ಅಪಘಾತ ಸಂಭವಿಸಿದೆ.

ನಗರದ ಗಂಜ್ ಪ್ರದೇಶದ ಹೈವೈ ರಸ್ತೆಯಲ್ಲಿ ಟ್ರಕ್ ವೊಂದು ಇವರ ಕಾರಿಗೆ ಹಿಂದಿನಿಂದ ಗುದ್ದಿದೆ. ಅಪಘಾತದ ರಭಸಕ್ಕೆ ಕಾರಿನ ಚಾಲಕನ ನಿಯಂತ್ರಣ ತಪ್ಪಿ ಅಪಘಾತಕ್ಕೆ ಈಡಾಗಿದೆ. ಕಾರು ಸಂಪೂರ್ಣ ನುಜ್ಜು,ಜುಗ್ಗು ಆಗಿದ್ದು, ರಾಜೂ ಗೌಡ



ಅವರಿಗೆ ಅಲ್ಪಸ್ವಲ್ಪ ತರಚಿದ ಗಾಯಗಳಾಗಿವೆ. ಪ್ರಥಮ ಚಿಕಿತ್ಸೆ ಪಡೆದು ವಾಪಸ್ ಮನೆಗೆ ಮರಳಿ ವಿಶ್ರಾಂತಿ ಪಡೆಯುತ್ತಿದ್ದಾರೆ ತಿಳಿದುಬಂದಿದೆ.

# ಮೆಟ್ರೋ ಪ್ರಯಾಣ ದರ ಏರಿಸಿದರೆ ಪ್ರತಿಭಟನೆ

**ಬೆಂಗಳೂರು, ಜ. 17 :** ಬೆಂಗಳೂರು ಮೆಟ್ರೋ ರೈಲಿನ ಪ್ರಯಾಣ ದರವನ್ನ ಮತ್ತೆ ಏರಿಸಿದರೆ ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ದಕ್ಷಿಣ ಲೋಕಸಭಾ ಬೆಂಗಳೂರಿನ ದಕ್ಷಿಣ ಲೋಕಸಭಾ ಸದಸ್ಯ ತೇಜಸ್ವಿ ಸೂರ್ಯ ಎಚ್ಚರಿಕೆ ನೀಡಿದ್ದಾರೆ ಬೆಂಗಳೂರಿನ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರುಬೆಂಗಳೂರು ಮೆಟ್ರೋ ಇಂದು ದೇಶದಲ್ಲೇ ಅತ್ಯಂತ ದುಬಾರಿ ಮೆಟ್ರೋ ಆಗಿದೆ. ಇದರ ಪರಿಣಾಮವಾಗಿ ಸಾಮಾನ್ಯ ಜನರು ಮೆಟ್ರೋ ಬಳಸಲು ಹಿಂಜರಿಯುವ ಪರಿಸ್ಥಿತಿ ನಿರ್ಮಾಣವಾಗಿದೆ. ದೆಹಲಿ, ಚೆನ್ನೈ, ಕೊಚ್ಚಿ ಮೆಟ್ರೋಗಳಲ್ಲಿ 10 ಕಿಲೋಮೀಟರ್ ಪ್ರಯಾಣಕ್ಕೆ ಇರುವ ದರವನ್ನು ಬೆಂಗಳೂರಿನ ಮೆಟ್ರೋದೊಂದಿಗೆ ಹೋಲಿಸಿದರೆ ಇಲ್ಲಿ ದರ ದ್ವಿಗುಣವಾಗಿದೆ, ಎಂದು ಕಿಡಿಕಾರಿದರು.

ಮುಂಬರುವ ಫೆಬ್ರುವರಿಯಲ್ಲಿ ಇದೀಗ ಮತ್ತೆ ಬಿ.ಎಂ. ಆರ್.ಸಿ.ಎಲ್ 5% ದರ ಏರಿಕೆಗೆ ಮುಂದಾಗಿರುವುದು ಅಕ್ಷಮ್ಯ. ರಾಜ್ಯ ಸರ್ಕಾರ ಹಾಗೂ ಬಿ.ಎಂ. ಆರ್.ಸಿ.ಎಲ್ ಜನರನ್ನು ಸುಲಿಗೆ ಮಾಡುವ ಕೆಲಸ ಮಾಡುತ್ತಿವೆ. ಇದರ ಜೊತೆಗೆ ಆರೆಂಜ್ ಲೈನ್ ಮೆಟ್ರೋ ಕಾಮಗಾರಿ ಕಳೆದ ನಾಲ್ಕು ವರ್ಷಗಳಿಂದ ತೀವ್ರವಾಗಿ ವಿಳಂಬವಾಗಿದ್ದು, ಇದಕ್ಕೂ ಬಿಎಂಆರ್ಸಿಎಲ್ ಹೊಣೆಗಾರಿಕೆ ವಹಿಸಬೇಕು ಎಂದು ಒತ್ತಾಯಿಸಿದ್ದಾರೆ.

" ಹಿಂದೆ ದರ ನಿಗದಿ ಸಮಿತಿ ತೀರ್ಮಾನಿಸಿದ್ದ ನಿರ್ಧಾರವೇ ತಪ್ಪಾಗಿದೆ ಎಂದು ನಾವು ಸ್ಪಷ್ಟವಾಗಿ ಕಿವಿ ಹಿಂಡುವ ಕೆಲಸ ಮಾಡಿದ್ದೆವು. ಆದರೆ ಬಿ.ಎಂ. ಆರ್.ಸಿ.ಎಲ್ ಅದನ್ನು ಗಂಭೀರವಾಗಿ ಪರಿಗಣಿಸಲಿಲ್ಲ. ಈಗಲಾದರೂ ಈ ತಪ್ಪು ನಿರ್ಧಾರವನ್ನು ಸರಿಪಡಿಸಬೇಕು. ಮಾನ್ಯ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ಅವರಿಗೆ ನಾನು ಸ್ಪಷ್ಟವಾಗಿ ಹೇಳುತ್ತೇನೆ. ರಾಜ್ಯ ಸರ್ಕಾರ ರಾಜಕೀಯ ಮಾಡುವುದನ್ನು ಬಿಟ್ಟು ಜನರ ಪರವಾಗಿ ನಿಲ್ಲಬೇಕು. ಮೆಟ್ರೋ ದರ ನಿಗದಿ ಮಾಡುವ ದರನಿಗದಿ ಸಮಿತಿ ಪುನರ್ ರಚನೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ ತಕ್ಷಣ ಪತ್ರ ಬರೆಯಬೇಕು. ಈ ವಿಚಾರದಲ್ಲಿ



ಬೆಂಗಳೂರಿನ ಎಲ್ಲಾ ಸಂಸದರ ಸಂಪೂರ್ಣ ಸಹಕಾರ ಇರುತ್ತದೆ" ಎಂದು ಸಂಸದ ಸೂರ್ಯ ರವರು ಆಗ್ರಹಿಸಿದ್ದಾರೆ.

ಫೆಬ್ರವರಿಯಲ್ಲಿ ಮತ್ತೆ ಮೆಟ್ರೋ ದರ ಏರಿಕೆ ಮಾಡಲು ಬಿ.ಎಂ. ಆರ್.ಸಿ.ಎಲ್ ಮುಂದಾದರೆ, ಬಿಜೆಪಿ ವತಿಯಿಂದ ಪ್ರತಿಯೊಂದು ಮೆಟ್ರೋ ನಿಲ್ದಾಣದ ಮುಂಭಾಗದಲ್ಲಿ ಭಾರಿ ಪ್ರತಿಭಟನೆ ನಡೆಸಲಾಗುತ್ತದೆ. ದರ ಹೆಚ್ಚಿಸಿ ಜನರಿಂದ ದರೋಡೆ ಮಾಡುವುದನ್ನು ತಕ್ಷಣ ನಿಲ್ಲಿಸಬೇಕು, ಎಂದು ರಾಜ್ಯ ಸರ್ಕಾರದ ನಡೆಯ ವಿರುದ್ಧ ಎಚ್ಚರಿಕೆ ನೀಡಿದರು.

ರಾಜ್ಯ ಸರ್ಕಾರ ದರ ಏರಿಕೆ ಮಾಡಿ, ಅದರ ಹೊಣೆಗಾರಿಕೆಯನ್ನು ಕೇಂದ್ರ ಸರ್ಕಾರದ ಮೇಲೆ ತಳ್ಳುವ ಕೆಲಸವನ್ನು ಬಿಡಬೇಕು. ಜನ ವಿರೋಧಿ, ಅವೈಜ್ಞಾನಿಕ ಮೆಟ್ರೋ ದರ ಏರಿಕೆಯನ್ನು ನಾವು ಯಾವ ಕಾರಣಕ್ಕೂ ಒಪ್ಪುವುದಿಲ್ಲ, ಎಂದು ತಿಳಿಸಿದ್ದು, ಬೆಂಗಳೂರಿನ ಸಾರ್ವಜನಿಕರ ಹಿತಾಸಕ್ತಿ ಕಾಪಾಡುವಂತೆ ಒತ್ತಾಯಿಸಿರುತ್ತಾರೆ.

# ಮೃತ ರಾಜಶೇಖರ್ ಮನೆಗೆ ಭೇಟಿ, 10 ಲಕ್ಷ ಪರಿಹಾರ ನೀಡಿದ ಬಿವೈವಿ



**ಬಳ್ಳಾರಿ:ಜ. 17:** ಮುಖ್ಯಮಂತ್ರಿಗಳು ರಾಜಶೇಖರ್ ಸಾವಿನ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡು, ಚೆಲ್ಲಾಟ ಆಡದೇ ಸಮಗ್ರ ತನಿಖೆ ಮಾಡಿಸಬೇಕು. ಬಡ ಕುಟುಂಬಕ್ಕೆ ನ್ಯಾಯ ಸಿಗಲು ಸಿಬಿಐ ತನಿಖೆ ಮಾಡಿಸಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.

ಇಂದು ಮೃತ ರಾಜಶೇಖರ್ ಅವರ ಮನೆಗೆ ಭೇಟಿ ನೀಡಿದಾಗ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ಮುಖಂಡರೇ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರರನ್ನು ಕೊಲೆ ಮಾಡಿದ್ದಾರೆ. ಅವರೇ ಗುಂಡು ಹಾರಿಸಿದ್ದರಿಂದ ಪ್ರಾಣ ಕಳಕೊಂಡಿದ್ದಾರೆ ಎಂದು ಆರೋಪಿಸಿದರು.

ನಾವು ಇವತ್ತು ವಿಪಕ್ಷ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಮಾಜಿ ಡಿಸಿಎಂ– ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವರಾದ ಬಿ.ಶ್ರೀರಾಮುಲು, ಜನಾರ್ಧನ ರೆಡ್ಡಿ, ಪ್ರಮುಖರು ಸೇರಿ ಬಡ ಕುಟುಂಬದವರನ್ನು ಭೇಟಿ ಮಾಡಿದ್ದೇವೆ. ಅವರ ತಾಯಿಯನ್ನೂ ಭೇಟಿ ಮಾಡಿದ್ದೇವೆ. ಅವರಿಗೆ 10 ಲಕ್ಷ ಪರಿಹಾರ ಕೊಟ್ಟಿದ್ದೇವೆ ಎಂದರು. ಆದರೆ, ಯಾವುದೇ ಪರಿಹಾರದಿಂದ ನ್ಯಾಯ ಕೊಡಿಸಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಬಿ.ಶ್ರೀರಾಮುಲು ಅವರು ಮಾತನಾಡಿ, ರಾಜಶೇಖರರ ಸಾವಿನ ಸಂದರ್ಭದಲ್ಲಿ ಅನೇಕ ಜನರಲ್ಲಿ ಗೊಂದಲ ಇತ್ತು. ಬಿಜೆಪಿಯವರಿಂದ ಕೊಲೆ ಆಗಿದೆ ಎಂದು ತಿಳಿಸುವ ಕೆಲಸ ಮಾಡಿದ್ದರು. ಈ ಕೊಲೆ ಕಾಂಗ್ರೆಸ್ಸಿನವರಿಂದಲೇ ಆಗಿದೆ ಎಂಬ ವಿಷಯಕ್ಕೆ ಸಂಬಂಧಿಸಿದ ಎಲ್ಲ ವಿಡಿಯೋಗಳನ್ನು ನಾವು ಕೊಟ್ಟಿದ್ದೇವೆ ಎಂದು ತಿಳಿಸಿದರು.


ಸಾವು ಯಾರಿಂದ ಎಂಬ ವಿಷಯದಲ್ಲಿ ಗೊಂದಲ ಇದ್ದ ಕಾರಣ ಕೂಡಲೇ ಇಲ್ಲಿ ಬಂದಿರಲಿಲ್ಲ. ಇದೀಗ ಪರಿಹಾರದ ಹಣವನ್ನು ಚೆಕ್ ಮೂಲಕ ಮೃತರ ತಾಯಿಗೆ ಕೊಡಲಾಗಿದೆ ಎಂದು ವಿವರಿಸಿದರು.

ಯುವ ಮಾರ್ಗ
www.yuvamarga.com Yuva Marga yuva_marga_

# ಮಾವಿನಕೆರೆ ಸೇರುವ ಚರಂಡಿ ಕಲುಷಿತ ನೀರು ತಿರುವು ಕಾಮಗಾರಿಗೆ ಚಾಲನೆ

ಯುವಮಾರ್ಗ ಸುದ್ದಿ





**ರಾಯಚೂರು,ಜ.17–** ನಗರದ ಐತಿಹಾಸಿಕ ಮಾವಿನಕೆರೆಯ ನೀರು ಶುದ್ಧೀಕರಣ ಮತ್ತು ಕೆರೆ ಪ್ರದೇಶದ ಆವರಣದ ಸೌಂದರ್ಯಗೊಳಿಸುವ ಹಿನ್ನೆಲೆಯಲ್ಲಿ ರಾಯಚೂರು ಮಹಾನಗರ ಪಾಲಿಕೆಯು ಅಂದಾಜು 2.5 ಕೋಟಿ ರೂ. ವೆಚ್ಚದಲ್ಲಿ ಕೈಗೊಂಡ ಮಾವಿನಕೆರೆ ಪ್ರವೇಶಿಸುವ ವಿವಿಧೆಡೆಯ ಒಳಚರಂಡಿ ಕಲುಷಿತ ನೀರು ತಿರುವು ಹಂತ–1ರ ಕಾಮಗಾರಿಗೆ ವೈದ್ಯಕೀಯ ಶಿಕ್ಷಣ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಜನವರಿ 16ರಂದು ಭೂಮಿಪೂಜೆ ನೆರವೇರಿಸಿದರು. ನಗರದ ಐತಿಹಾಸಿಕ ಕೋಟೆಯ ದೀಪಾಲಂಕಾರ ಕಾಮಗಾರಿ ಬಳಿಕ ನೇರವಾಗಿ ಮಾವಿನಕೆರೆ ಪ್ರದೇಶಕ್ಕೆ ತೆರಳಿದ ಸಚಿವರು, ರಾಯಚೂರು ಮಹಾಜನತೆಯ ಬಹುದಿನಗಳ ಆಶಯದ ಮಹತ್ವದ ಕಾಮಗಾರಿಗೆ ಚಾಲನೆ ನೀಡಿದರು.

ಈ ವೇಳೆ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ, ಮಾವಿನಕೆರೆಗೆ ರಾಯಚೂರು ಸಿಟಿಯ 15 ಕಡೆಗಳಲ್ಲಿನ ಒಳಚರಂಡಿಯ ಕಲುಷಿತ ನೀರು ಸೇರುತ್ತದೆ. ಮೊದಲ ಹಂತದಲ್ಲಿ 2.5 ಕೋಟಿ ರೂ ವೆಚ್ಚದಲ್ಲಿ ಕಾಮಗಾರಿ ಕೈಗೊಂಡು 7 ಕಡೆಗಳಲ್ಲಿನ ಚರಂಡಿ ನೀರನ್ನು ಬ್ಲಾಕ್ ಮಾಡಿ ಅದನ್ನು ಬೇರೆಡೆ ಸಾಗಿಸುವ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ. ಬಾಕಿ ಕಾರ್ಯವನ್ನು ಅಮೃತ ಯೋಜನೆಯಡಿ ಕೈಗೊಳ್ಳಲು ಯೋಜಿಸಲಾಗಿದೆ ಎಂದು ಸಚಿವರು ತಿಳಿಸಿದರು. ಈ ಸಂದರ್ಭದಲ್ಲಿ ಮಹರ್ಷಿ ವಾಲ್ಮೀಕಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್, ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ, ಮಾನ್ವಿ ಶಾಸಕರಾದ ಹಂಪಯ್ಯ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕುಮಾರ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷು ಗಿರಿ ಹಾಗೂ ಇನ್ನಿತರ ಗಣ್ಯ ಮಹನಿಯರು ಇದ್ದರು.

# ಜನವರಿ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

**ರಾಯಚೂರು,ಜ.17–** ಇಲ್ಲಿಯ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2026ರ ಜನವರಿ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 21 ಕೆ.ಜಿ ಜೋಳ ಮತ್ತು 14 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 03 ಕೆ.ಜಿ ಜೋಳ ಮತ್ತು 02 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ & ರಾಜ್ಯ ವ್ಯಾಪ್ತಿಯ ಅಂತ್ಯೋದಯ(ಎಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾಲಿಕೆಯಿಂದ ಸೆಪ್ಟಿಕ್ ಟ್ಯಾಂಕ್ ವಾಹನಗಳ ನೋಂದಾಣಿಗೆ ಸೂಚನೆ

**ರಾಯಚೂರು,ಜ.17–** ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಖಾಸಗಿ ಸೆಪ್ಟಿಕ್ ಟ್ಯಾಂಕ್ ವಾಹನಗಳು ಅನಧಿಕೃತವಾಗಿ ಸ್ವಚ್ಛ ಮಾಡುತ್ತಿರುವುದು ಕಂಡು ಬಂದಿದ್ದು, ಖಾಸಗಿ ಡಿಸ್ಲಡ್ಜಿಂಗ್ ವಾಹನಗಳ ಮಾಲೀಕರು ಪಾಲಿಕೆಯಲ್ಲಿ ಕಡ್ಡಾಯವಾಗಿ ನೋಂದಾಣಿ ಮಾಡಿಕೊಳ್ಳಬೇಕು. ತಪ್ಪಿದ್ದಲ್ಲಿ ಮಹಾನಗರ ಪಾಲಿಕೆ ಅಧಿನಿಯಮ 1976ರ ಪ್ರಕಾರ ಕ್ರಮಕೈಗೊಳ್ಳುವುದಲ್ಲದೇ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಆಗಿ ನೇಮಕ ಮಾಡಿಕೊಳ್ಳುವುದನ್ನು ನಿಷೇಧಿಸುವುದು ಮತ್ತು ಅವರ ಪುನರ್ವಸತಿ ಕಾಯ್ದೆ, 2013ರಡಿ ತಮ್ಮ ಮೇಲೆ ಕಾನೂನು ರೀತ್ಯಾ ಕಠಿಣ ಕ್ರಮ ಜರುಗಿಸಲಾಗುವುದು. ಮತ್ತು ಸಾರ್ವಜನಿಕರು ಪಾಲಿಕೆಯ ಡಿಸ್ಲಡ್ಜಿಂಗ್ ವಾಹನಗಳು ಅಥವಾ ಪಾಲಿಕೆಯಿಂದ ನೋಂದಾಯಿತ ಡಿಸ್ಲಡ್ಜಿಂಗ್ ವಾಹನಗಳಿಂದ ಸೆಪ್ಟಿಕ್ಟ್ಯಾಂಕ್ ಸ್ವಚ್ಛಗೊಳಿಸಲು ಪಾಲಿಕೆಗೆ ಅರ್ಜಿ ನೀಡಿ ಸೇವೆ ಪಡೆಯಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಸೂಚನೆ

# ರಾಯಚೂರು ಜಿಲ್ಲಾ ಉತ್ಸವದ ಕಾರ್ಯಕ್ರಮಗಳು ಫೆಬ್ರವರಿ 5, 6, 7ರವರೆಗೆ ನಿರಂತರ ನಡೆಯಲಿ

ಯುವಮಾರ್ಗ ಸುದ್ದಿ



**ರಾಯಚೂರು,ಜ.17–** ಈ ಮೊದಲು ನಿರ್ಧರಿಸಿದ್ದ ರಾಯಚೂರು ಜಿಲ್ಲಾ ಉತ್ಸವ–2026ರ ಎಲ್ಲ ಕಾರ್ಯಕ್ರಮಗಳು ಪರಿಷ್ಕೃತ ದಿನಾಂಕ 2026ರ ಫೆಬ್ರವರಿ 5, 6 ಮತ್ತು 7ರವರೆಗೆ ನಿರಂತರ ನಡೆಯುವಂತೆ ಕಾರ್ಯ ಯೋಜನೆ ರೂಪಿಸಿ ಕಾರ್ಯಪ್ರವೃತ್ತರಾಗಬೇಕು ಎಂದು ರಾಯಚೂರು ಉತ್ಸವ ಆಚರಣಾ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಆಯಾ ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜನವರಿ 16ರಂದು ನಡೆದ ಮತ್ತೊಂದು ಸುತ್ತಿನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಬೇರೆ ಬೇರೆ ದಿನಾಂಕಗಳಂದು ನಿಗದಿಯಾದ ಕಾರ್ಯಕ್ರಮಗಳನ್ನು ಯತಾರೀತಿಯಲ್ಲಿ ನಡೆಸಬೇಕು.

ಉತ್ಸವದ ಸಿದ್ಧತೆಗೆ ಇದೀಗ ಸ್ವಲ್ಪ ದಿನಗಳ ಕಾಲಾವಕಾಶ ಲಭಿಸಿದೆ. ಕೆಲವು ಸ್ಪರ್ಧೆಗಳಲ್ಲಿ ಮಾತ್ರ ಸ್ವಲ್ಪ ಮಾರ್ಪಾಡುಗಳಾಗಲಿವೆ. ಇನ್ನುಳಿದಂತೆ ಯಾವುದೇ ಬದಲಾವಣೆಗಳು ಇರುವುದಿಲ್ಲ. ಅಧಿಕಾರಿಗಳು ಮತ್ತು ಸಿಬ್ಬಂದಿ ವಿರಮಿಸದೇ ನಿರಂತರವಾಗಿ ಉತ್ಸವದ ನಾನಾ ಕಾರ್ಯಚಟುವಟಿಕೆಗಳಲ್ಲಿ ಭಾಗಿಯಾಗಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜನವರಿ 31 ರಿಂದ ಎರಡು ದಿನ ಮಕ್ಕಳ ಉತ್ಸವ: ಜನವರಿ 31 ಹಾಗೂ ಫೆಬ್ರವರಿ 1ರಂದು ಎರಡು ದಿನಗಳ ಕಾಲ ಮಕ್ಕಳ ಉತ್ಸವ ನಡೆಸಲು ತೀರ್ಮಾನಿಸಲಾಗಿದೆ. ಈ ಉತ್ಸವದಲ್ಲಿ ಜಿಲ್ಲೆಯ ಎಲ್ಲ ಪ್ರತಿಭಾನ್ವಿತ ಮಕ್ಕಳಿಗೆ ಅವಕಾಶ ಸಿಗಬೇಕು. ಈ ಉತ್ಸವದ ಬಗ್ಗೆ ವ್ಯಾಪಕ ಪ್ರಚಾರ ನಡೆಸಬೇಕು. ಸಣ್ಣ ವಯೋಮಾನದ ಮಕ್ಕಳಿಗು ಅವಕಾಶ ಸಿಗುವ ಹಾಗೆ ವಯಸ್ಸಿಗನುಸಾರ ಬೇರೆ ಬೇರೆ ಸ್ಪರ್ಧೆಗಳನ್ನು ನಡೆಸಲು ಕಾರ್ಯಯೋಜನೆ ರೂಪಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ನಿರಂತರ ಸಭೆ ನಡೆಸಿ: ಆಯಾ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳು ತಮ್ಮ ತಮ್ಮ ಹಂತದಲ್ಲಿ ಸಭೆ ನಡೆಸಿ ಸಿದ್ಧತೆಗಳ ಬಗ್ಗೆ ಪರಿಶೀಲಿಸಬೇಕು. ಆಯಾ ಸಮಿತಿಗಳ ಕಾರ್ಯವನ್ನು ಒಪ್ಪಿಸಿದರೆ ನಾವು ಸಹ ಸೇವೆಗೆ ಸಿದ್ಧ ಎನ್ನುವ, ಸ್ವಯಂಪ್ರೇರಿತರಾಗಿ ಕೆಲಸ ಮಾಡಲು ಇಚ್ಚಿಸುವಂತಹ ಸಂಘ ಸಂಸ್ಥೆಗಳ ಸದಸ್ಯರ ಮತ್ತು ಸ್ವಯಂ ಸೇವಕರನ್ನು ಗುರುತಿಸಿ ಅವರ ಸಹಾಯ, ಸಲಹೆ, ಸಹಕಾರ ಮತ್ತು ಸೇವೆ ಪಡೆಯಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸಲಹೆ ಮಾಡಿದರು. ಸಮನ್ವಯ ಸಾಧಿಸಿ: ಯಾವುದೇ ಕಾರ್ಯ ಸಾಧನೆಗೆ ಸಮನ್ವಯ ಮುಖ್ಯ. ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಪರಸ್ಪರ ಸಮನ್ವಯ ಸಾಧಿಸಿ ಕಾರ್ಯ ನಿರ್ವಹಿಸಬೇಕು. ಪ್ರತಿಯೊಂದು ಇವೆಂಟಗೂ ಹೆಚ್ಚಿನ ಜನರು ಸೇರಿ ಯಶಸ್ವಿಯಾಗುವಂತೆ ಪ್ರಚಾರ ಕಾರ್ಯಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ, ಬಸವಣೆಪ್ಪ ಕಲಶೆಟ್ಟಿ ಹಾಗೂ ವಿವಿಧ ಸಮಿತಿಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಇದ್ದರು.

# ರಾಯಚೂರಿನಲ್ಲಿ ರಾಷ್ಟ್ರೀಯ ರಸ್ತೆ ಸುರಕ್ಷತಾ ಜಾಗೃತಿ ಮಾಸಾಚರಣೆ

**ರಾಯಚೂರು,ಜ.17–** ಇಲ್ಲಿನ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ಇತ್ತೀಚೆಗೆ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಜಾಗೃತಿ ಮಾಸಾಚರಣೆ–2026ರ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಭಾರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ಸಿ.ಈರಣ್ಣ ಅವರು ವಹಿಸಿದ್ದರು. ಈ ವೇಳೆ ರಸ್ತೆ ಸುರಕ್ಷತೆ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದರು ಮತ್ತು ರಸ್ತೆ ಸುರಕ್ಷತೆ ನಿಯಮಗಳ ಬಗ್ಗೆ ಕರ ಪತ್ರಗಳನ್ನು ಹಂಚಲಾಯಿತು.

ಇದೇ ಸಂದರ್ಭದಲ್ಲಿ ಮೋಟಾರ್ ವಾಹನ ನಿರೀಕ್ಷಕರಾದ ರಾಕೇಶ್.ಎಂ, ಕಚೇರಿಯ ಅಧೀಕ್ಷಕರಾದ ಜೀನತ್ ಸಾಜೀದಾ, ಅರ್ಜುನ್, ಲೆಕ್ಕಾಧಿಕ್ಷಕಮೋಹಿನುದ್ದಿನ್ ಸೇರಿದಂತೆ ಇತರರು ಇದ್ದರು. ರವೀಂದ್ರ ರೆಡ್ಡಿ ಅವರು ಸ್ವಾಗತಿಸಿದರು. ರವಿ ಕಿರಣ ಅವರು ನಿರೂಪಿಸಿದರು.

### ಜಿಲ್ಲಾಡಳಿತದ ಸಹಯೋಗದೊಂದಿಗೆ ರಾಯಚೂರು ಮಹಾನಗರ ಪಾಲಿಕೆಯಿಂದ ವಿನೂತನ ಕಾರ್ಯ

# ರಾಯಚೂರಿನ ಐತಿಹಾಸಿಕ ಕೋಟೆಯ ದೀಪಾಲಂಕಾರ ಕಾಮಗಾರಿಗೆ ಚಾಲನೆ



ಯುವಮಾರ್ಗ ಸುದ್ದಿ


**ರಾಯಚೂರು,ಜ.17–** ರಾಯಚೂರು ಮಹಾನಗರ ಪಾಲಿಕೆಯ ಅನುದಾನದಲ್ಲಿ ಐತಿಹಾಸಿಕ ರಾಯಚೂರು ಕೋಟೆಯ ದೀಪಾಲಂಕಾರ ಕಾಮಗಾರಿಗೆ ವೈದ್ಯಕೀಯ ಶಿಕ್ಷಣ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಜನವರಿ 16ರಂದು ಚಾಲನೆ ನೀಡಿದರು.

ನಗರದ ಕೇಂದ್ರ ಬಸ್ ನಿಲ್ದಾಣದ ಪ್ರವೇಶ ದ್ವಾರದ ಕೋಟೆ ಪ್ರದೇಶದ ಬಯಲು ಗ್ರಂಥಾಲಯದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರು ವಿನೂತನ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ರಾಯಚೂರು ಮಹಾನಗರ ಪಾಲಿಕೆಯಿಂದ ಈಗಾಗಲೇ ರಾಯಚೂರು ಸಿಟಿಯ ಸೌಂದರ್ಯೀಕರಣ ಕಾರ್ಯ ಆರಂಭಗೊಂಡಿದೆ. ಸ್ವಚ್ಛತೆಯ ಬಗ್ಗೆ ಸಿಟಿ ಜನರಲ್ಲಿ ಜಾಗೃತಿ ಮೂಡಿಸಲು ಸಿಟಿಯ ಪ್ರಮುಖ ರಸ್ತೆಗಳಲ್ಲಿ ಸೌಂದರ್ಯ ಮತ್ತು ಶುಚಿತ್ವದ ಸಂದೇಶಕ್ಕಾಗಿ ಗೋಡೆಗಳ ಮೇಲೆ ಚಿತ್ರಪಟ ನಿರ್ಮಾಣ ಕಾರ್ಯ ಬಿರುಸಿನಿಂದ ನಡೆದಿದೆ. ಇದೀಗ ಕೋಟೆಗೆ ದೀಪಾಲಂಕಾರಕ್ಕು ಕಾರ್ಯ ಯೋಜನೆ ರೂಪಿಸಲಾಗಿದೆ. ರಾಯಚೂರು ಉತ್ಸವ ನಿಗದಿಯಾಗಿದ್ದರಿಂದಲು ಸಹ ರಾಯಚೂರು ಸಿಟಿಯನ್ನು ಹಬ್ಬದ ರೀತಿಯಲ್ಲಿ ಸಿಂಗಾರಗೊಳಿಸಲು ಸಹ ಯೋಜಿಸಿ ಜಿಲ್ಲಾಡಳಿತದ ಸಹಯೋಗದಿಂದಿಗೆ ಈ ಕಾರ್ಯ ಯೋಜನೆ ರೂಪಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಇದೆ ವೇಳೆ ಸಚಿವರಿಗೆ ವಿವರಿಸಿದರು.

ಈ ಸಂದರ್ಭದಲ್ಲಿ ಮಹರ್ಷಿ ವಾಲ್ಮೀಕಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್, ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ, ಮಾನ್ವಿ ಶಾಸಕರಾದ ಹಂಪಯ್ಯ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕುಮಾರ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷು ಗಿರಿ ಹಾಗೂ ಇನ್ನಿತರ ಗಣ್ಯ ಮಹನಿಯರು ಇದ್ದರು.

# ಶಾರ್ಟ್ ಸರ್ಕ್ಯೂಟ್‌ನಿಂದ ಪೇಂಟ್ಸ್ ಮಳಿಗೆಯಲ್ಲಿ ಭಾರೀ ಅಗ್ನಿ ಅವಘಡ ರೂ.60 ಲಕ್ಷ ನಷ್ಟ






ಯುವಮಾರ್ಗ ಸುದ್ದಿ

**ಮಾನ್ವಿ,ಜ.17–** ಪಟ್ಟಣದ ಬಸವ ವೃತ್ತದ ಅಪೂರ್ಣ ಚಿತ್ರಮಂದಿರದ ಎದುರುಗಡೆ ಇರುವ ಬಿಚ್ಚಾಲಿ ವೀರೇಶ್ ಬಾಬು ಅವರ ಮಾಲೀಕತ್ವದ ಶ್ರೀ ಲಕ್ಷ್ಮಿ ವೆಂಕಟೇಶ್ವರ ಪೇಂಟ್ಸ್ ಮಳಿಗೆಯಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಭಾರೀ ಬೆಂಕಿ ಅವಘಡ ಸಂಭವಿಸಿದೆ.

ಶುಕ್ರವಾರದಂದು ಬೆಳಿಗ್ಗೆ ಸುಮಾರು 4 ಗಂಟೆಯ ವೇಳೆಗೆ ಮಳಿಗೆಯಿಂದ ಹೊಗೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಸ್ಥಳೀಯರು ಅಂಗಡಿ ಮಾಲೀಕರಿಗೆ ಮಾಹಿತಿ ನೀಡಿದ್ದಾರೆ. ಮಳಿಗೆಯಲ್ಲಿ ಪೇಂಟ್ ಸೇರಿದಂತೆ ರಾಸಾಯನಿಕ ವಸ್ತುಗಳು ಸಂಗ್ರಹವಾಗಿದ್ದ ಕಾರಣ ಬೆಂಕಿ ಕ್ಷಿಪ್ರವಾಗಿ ವ್ಯಾಪಿಸಿ ತೀವ್ರವಾಗಿ ಹೊತ್ತಿ ಉರಿದಿದೆ. ಅಗ್ನಿಶಾಮಕ ದಳದವರು ಸ್ಥಳಕ್ಕೆ ಆಗಮಿಸಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದರೂ, ಅಷ್ಟರೊಳಗೆ ಮಳಿಗೆ ಸಂಪೂರ್ಣವಾಗಿ ಸುಟ್ಟು ಹೋಗಿದ್ದು ಒಳಗಿದ್ದ ಎಲ್ಲಾ ಸಾಮಗ್ರಿಗಳು ಕರಕಲಾಗಿವೆ. ಈ ಅವಘಡದಲ್ಲಿ ಅಂದಾಜು ರೂ. 60 ಲಕ್ಷ ನಷ್ಟ ಸಂಭವಿಸಿರುವುದಾಗಿ ತಿಳಿದುಬಂದಿದೆ.

ಮಳಿಗೆಯ ಅಕ್ಕಪಕ್ಕದಲ್ಲಿರುವ ಮಾರುತಿ ಬುಕ್ ಸ್ಟಾಲ್ ಹಾಗೂ ಶ್ರೀ ಜೈ ಹನುಮಾನ್ ಕಿರಾಣಿ ಸ್ಟೋರ್ಗಳಿಗೆ ಯಾವುದೇ ಹಾನಿ ಸಂಭವಿಸಿಲ್ಲ. ಹೆಚ್ಚಿನ ಅಪಾಯ ತಪ್ಪಿದ ಹಿನ್ನೆಲೆಯಲ್ಲಿ ಸ್ಥಳೀಯರು ನಿಟ್ಟುಸಿರು ಬಿಟ್ಟಿದ್ದಾರೆ.ಘಟನೆಯ ಕುರಿತು ಸಂಬಂಧಿಸಿದ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H